MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 114 | ಶುಕ್ರವಾರ : 20-02-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 114 | FRIDAY : 20-02-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಕಾಂಗ್ರೆಸ್ ಸರ್ಕಾರ ಕಿತ್ತೊಗೆಯಲು ಬಿಜೆಪಿ ಸಂಕಲ್ಪ



**ಬೆಂಗಳೂರು, ಫೆ. 19–** ರಾಜ್ಯದ ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವ ಸಂಕಲ್ಪ ತೊಡುವಂತೆ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೆಖಾವತ್ ಬಿಜೆಪಿ ಕಾರ್ಯಕರ್ತರಿಗೆ ಕರೆ ನೀಡಿದರು.

ಬೆಂಗಳೂರಿನ ಅರಮನೆ ಮೈದಾನದಲ್ಲಿಂದು ರಾಜ್ಯ ಬಿಜೆಪಿ ಕಾರ್ಯಕಾರಿಣಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಕರ್ನಾಟಕದಲ್ಲಿ ಪ್ರಸ್ತುತ ಇರುವ ಪರಿಸ್ಥಿತಿ ಬಗ್ಗೆ ಗಂಭೀರ ಅವಲೋಕನ ಮಾಡಬೇಕಿದೆ. ಈ ಸಭೆಯ ಮೂಲಕ ಸರ್ಕಾರದ ವಿರುದ್ಧ ಹೋರಾಟಗಳನ್ನು ನಡೆಸುವ ತೀರ್ಮಾನ ಮಾಡುವ ಜತೆಗೆ ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವ ಸಂಕಲ್ಪ ತೊಡೋಣ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್‌ನ ದುರಾಡಳಿತವಿದೆ. ಈ ಸಭೆಯ ಮೂಲಕ ಸರ್ಕಾರದ ವಿರುದ್ಧ ಸಂಘರ್ಷದ ಹಾದಿಯಲ್ಲಿ ಹೋಗುವ ತೀರ್ಮಾನಗಳನ್ನು ಮಾಡಿ, ಕಾಂಗ್ರೆಸ್ ದುರಾಡಳಿತದ ವಿರುದ್ಧ ರಾಜ್ಯಾದ್ಯಂತ ಹೋರಾಟಗಳನ್ನು ನಡೆಸಿ ಎಂದು ಕಾರ್ಯಕರ್ತರಿಗೆ ಕರೆ ನೀಡಿದರು.

ಬಿಜೆಪಿಯ ಸಿದ್ಧಾಂತ, ವಿಚಾರಧಾರೆಗೆ ಮತ್ತಷ್ಟು ಪುಷ್ಠಿ ಕೊಡೋಣ. ಪಕ್ಷದ ಬಲವರ್ಧನೆ ಮಾಡಿ ಮತ್ತೆ ರಾಜ್ಯದಲ್ಲಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರುವ ಪಣ ತೋಡೋಣ ಎಂದು ಹೇಳಿದರು.

ಪ್ರಧಾನಿ ಮೋದಿ ನೇತೃತ್ವದಲ್ಲಿ ದೇಶ ಪ್ರಗತಿಯ ಹಾದಿಯಲ್ಲಿ ಸಾಗಿದೆ. ಭಾರತದ ವಿಕಸಿತಕ್ಕೆ ಸಂಕಲ್ಪ ತೊಡೋಣ ಎಂದು ಹೇಳಿದರು.

ಯಡಿಯೂರಪ್ಪ ಭೀಷ್ಮ ಪಿತಾಮಹ

ರಾಜಕಾರಣದಲ್ಲಿ 50 ವರ್ಷಗಳನ್ನು ಪೂರೈಸಿರುವ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಅಭಿನಂದಿಸಿದ ಕೇಂದ್ರ ಸಚಿವ ಶೆಖಾವತ್, ಯಡಿಯೂರಪ್ಪ ಅವರು ಕರ್ನಾಟಕ ಬಿಜೆಪಿಯ ಭೀಷ್ಮ ಪಿತಾಮಹ ಎಂದು ಬಣ್ಣಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಗೊಂದಲವಿದೆ. ಯಾರು ಸಿಎಂ ಆಗಬೇಕು ಎಂಬುದನ್ನು ಹತ್ತು ದಿನಗಳ ಕಾಲ ಚರ್ಚೆ ನಡೆಸಿ, ಪ್ರಜಾಪ್ರಭುತ್ವಕ್ಕೆ ಕಾಂಗ್ರೆಸ್ಸಿಗರು ಅಪಮಾನ ಮಾಡಿದ್ದಾರೆ. ಈಗಲೂ ಕುರ್ಚಿ ಕಚ್ಚಾಟ ನಿಂತಿಲ್ಲ. ಈ ಕುರ್ಚಿ ಗಲಾಟೆ ಆಡಳಿತದ ಮೇಲೆ ಪರಿಣಾಮ ಬೀರಿದೆ ಎಂದರು.

ಇದು ಭ್ರಷ್ಟಾಚಾರ ಮಾಡುವ ಸರ್ಕಾರ. ವಾಲ್ಮೀಕಿ ನಿಗಮದಲ್ಲಿ ಭ್ರಷ್ಟಾಚಾರವಾಗಿದೆ ಎಂದು ಮುಖ್ಯಮಂತ್ರಿಗಳೇ ಒಪ್ಪಿಕೊಂಡಿದ್ದಾರೆ. ಈ ಸರ್ಕಾರವನ್ನು ಸಂಘಟನಾ ಶಕ್ತಿಯಿಂದ ಕಿತ್ತೊಗೆಯಿರುವ ಕಾರ್ಯಕರ್ತರಿಗೆ ಕಿವಿ ಮಾತು ಹೇಳಿದರು.

ರಾಜ್ಯದಲ್ಲಿ ಯುವಕರಿಗೆ ಉದ್ಯೋಗ ಸಿಗುತ್ತಿಲ್ಲ. ಕಾನೂನು ಸುವ್ಯವಸ್ಥೆಯೂ ಹಾಳಾಗಿದೆ. ಡ್ರಗ್ ಮಾಫಿಯಾ ಹೆಚ್ಚಾಗಿದೆ. ಇಲ್ಲಿನ ಪೊಲೀಸರು ಡ್ರಗ್ ಫ್ಯಾಕ್ಟರಿ ಪತ್ತೆ ಮಾಡಲು ಆಗಲಿಲ್ಲ ಎಂದು ಅವರು ಟೀಕಿಸಿದರು.

ಕಾಂಗ್ರೆಸ್ ಪಕ್ಷ ತನ್ನ ವೋಟ್ ಬ್ಯಾಂಕ್‌ಗಾಗಿ ವಂದೇ ಮಾತರಂ ಗೀತೆಗೆ ವಿರೋಧ 2ನೇಪುಟಕ್ಕೆ

## ಕೆಲಸ ಕಳೆದುಕೊಂಡ ಸಫಾಯಿ ಕರ್ಮಚಾರಿಗಳ ಮರುನೇಮಕಕ್ಕೆ ಆದೇಶ

### ರಿಮ್ಸ್‌ಗೆ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ಪಿ. ರಘು ಭೇಟಿ; ಪರಿಶೀಲನೆ



ಯುವಮಾರ್ಗ ಸುದ್ದಿ

**ರಾಯಚೂರು ಫೆ.19–** ರಾಯಚೂರು ಪ್ರವಾಸದಲ್ಲಿದ್ದ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷರಾದ ಪಿ. ರಘು ಅವರು ಫೆಬ್ರವರಿ 19ರಂದು ನಗರದ ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದರು.

ಭೇಟಿ ವೇಳೆ ಅಧ್ಯಕ್ಷರು, ಅಲ್ಲಿನ ಸ್ವಚ್ಛತಾ ಕಾರ್ಯ ಹಾಗೂ ಕರ್ಮಚಾರಿಗಳ ಕೆಲಸದ ಪರಿಸ್ಥಿತಿಯ ಬಗ್ಗೆ ಪರಿಶೀಲಿಸಿದರು.

**ರಿಮ್ಸ್ ಅಧಿಕಾರಿಗಳೊಂದಿಗೆ ಸಭೆ:** ಭೇಟಿ ಸಂದರ್ಭದಲ್ಲಿ ಅಧ್ಯಕ್ಷರು, ರಿಮ್ಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ನಾನಾ ವಿಷಯಗಳ ಬಗ್ಗೆ ಚರ್ಚಿಸಿದರು. ಸ್ವಚ್ಛತಾ ಸಿಬ್ಬಂದಿಯಿಂದ ಮಲ ಎತ್ತಿಸುವುದು ಅಮಾನವೀಯ ಕಾರ್ಯವಾಗುತ್ತದೆ. ಈ ಅನಿಷ್ಠ ಪದ್ದತಿ ತೊಲಗಬೇಕು.

ಈ ಕಾರ್ಯಕ್ಕೆ ಹಲವು ಯಂತ್ರೋಪಕರಣಗಳಿವೆ. ಅದನ್ನು ಬಿಟ್ಟು ಸಿಬ್ಬಂದಿಯಿಂದ ಮಲ ಎತ್ತಿಸುವ ಕೆಲಸ ಮಾಡಿಸುವುದು ಸರಿಯಲ್ಲ. ಇತ್ತೀಚೆಗೆ ರಿಮ್ಸನಲ್ಲಿ ಸ್ವಚ್ಛತೆ ಕೆಲಸ ಮಾಡುವ ಸಿಬ್ಬಂದಿಯಿಂದ ಮಲ ಎತ್ತಿಸಿದ ಕುರಿತು ದಾಖಲೆ ಸಮೇತ ದೂರು ಬಂದಿದ್ದು, ಈ ಕೆಲಸ ಮಾಡಿಸಿದ 2ನೇಪುಟಕ್ಕೆ

## ಯಶಸ್ವಿನಿ ಆರೋಗ್ಯ ಯೋಜನೆಯ ಮಹತ್ವ ಕುರಿತು ತರಬೇತಿ



ಯುವಮಾರ್ಗ ಸುದ್ದಿ

**ಮಸ್ಕಿ ಫೆ. 19–** ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ, ರಾಯಚೂರು ಬಳ್ಳಾರಿ ಕೊಪ್ಪಳ ಹಾಗೂ ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟ (ಕೆ,ಎಂ,ಎಫ್), ಸಹಕಾರ ಇಲಾಖೆ, ಯಶಸ್ವಿನಿ ಟ್ರಸ್ಟ್, ಸಿಂಧನೂರು ಉಪವಿಭಾಗದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಇತರ ವಿವಿಧ ಸಹಕಾರ ಸಂಘಗಳ ಸಂಯುಕ್ತ ಆಶ್ರಯದಲ್ಲಿ "ಸಿಂಧನೂರು ಉಪವಿಭಾಗದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಮತ್ತು ಇತರೆ ವಿವಿಧ ಸಹಕಾರ ಸಂಘಗಳ ಮುಖ್ಯಕಾರ್ಯನಿರ್ವಹಣಾಧಿಕಾರಿ ಮತ್ತು ಕಾರ್ಯದರ್ಶಿಗಳಿಗೆ ಯಶಸ್ವಿನಿ ಆರೋಗ್ಯ ಯೋಜನೆ ಕುರಿತು ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ಕಾರ್ಯಕ್ರಮ"ವನ್ನು ಪಟ್ಟಣದ ಗಚ್ಚಿನ ಮಠ, ಕೇಂದ್ರ ಶಾಲೆ ಹತ್ತಿರ, ಮಸ್ಕಿಯಲ್ಲಿ ಜರುಗಿಸಲಾಯಿತು. ಕಾರ್ಯಕ್ರಮದ ಉದ್ಘಾಟನೆಯನ್ನು ನಾಗಭೂಷಣ ಬಾರಕೇರ್ ಅಧ್ಯಕ್ಷರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಮಸ್ಕಿ ಇವರು ನೆರವೇರಿಸಿ ಶುಭ ಕೋರಿ ಮಾತನಾಡಿ ಸಂಘಗಳ ಮುಖ್ಯಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯದರ್ಶಿಗಳು ಜವಾಬ್ದಾರಿಯಿಂದ ಯಶಸ್ವಿನಿ ಫಲಾನುಭವಿಗಳ ಆನ್ ಲೈನ್ ನೋಂದಣಿ ಕಾರ್ಯವನ್ನು ಮಾಡುವಂತೆ ತಿಳಿಸಿ ಜಿಲ್ಲಾ ಸಹಕಾರ ಒಕ್ಕೂಟದಿಂದ ಜರುಗಿಸುವ ಇಂಥ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆಯುವಂತೆ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಚಂದ್ರಶೇಖರ್ ಗೂಗೇಬಾಳ ನಿರ್ದೇಶಕರು ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ ಇವರು ಮಾತನಾಡಿ ಜಿಲ್ಲಾ ಸಹಕಾರ ಒಕ್ಕೂಟದಿಂದ ಜರುಗುವ ವಿವಿಧ ತರಬೇತಿಗಳ ಕಾರ್ಯಕ್ರಮಗಳ (2ನೇ ಪುಟಕ್ಕೆ)

## ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ವಿವಿಧ ಕಾಮಗಾರಿಗಳನ್ನು ಪರಿಶೀಲಿಸಿದ ಕೇಂದ್ರ ತಂಡ

ಯುವಮಾರ್ಗ ಸುದ್ದಿ



**ಮಾನ್ವಿ,ಫೆ.19** ತಾಲೂಕಿನ ಮದ್ಲಾಪುರ್ ಹಾಗೂ ಪೋತ್ನಾಳ್ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ವಿವಿಧ ಕಾಮಗಾರಿಗಳನ್ನು ಕೇಂದ್ರ ಆಡಿಟ್ ಅಧಿಕಾರಿ ಕುಮುದ್ ದುಬೆ ನೇತೃತ್ವದ ತಂಡ ಪರಿಶೀಲನೆ ನಡೆಸಿ ತಾ.ಪಂ. ಇ.ಓ. ಖಾಲಿದ್ ಅಹ್ಮದ್ ರಿಂದ ಮಾಹಿತಿ ಪಡೆದುಕೊಂಡರು. ನಂತರ ಗ್ರಾಮಪಂಚಾಯಿತಿಗಳಲ್ಲಿನ 7 ರಿಜೀಸ್ಟರ್ ದಾಖಲೆಗಳನ್ನು ಹಾಗೂ ಎನ್.ಎಂ.ಎಂ.ಎಸ್. ಹಾಜರಾತಿ ಕಡತಗಳನ್ನು, ದೂರು ದಾಖಲೆಗಳ ರಿಜೀಸ್ಟರ್ ,ಅಸ್ತಿವಹಿ ರೀಜಿಸ್ಟರ್ ,ಸಮಾಜಿಕ ಲೆಕ್ಕ ಪರಿಶೋದನ ವಹಿ, ಗ್ರಾಮ ಸಭೆ,ಗ್ರಾಮ ಪಂಚಾಯತಿಯ ನಡಾವಳಿಗಳು , ಕಾಮಗಾರಿ ಪಟ್ಟಿಯನ್ನು ಪರಿಶೀಲಿಸಿದರು.

ಮದ್ಲಾಪುರ ಗ್ರಾಮದಲ್ಲಿ ನರೇಗಾವತಿಯಿಂದ ಕೈಗೊಳ್ಳಲಾದ ಕಾಮಗಾರಿಗಳಾದ ಅಬ್ಬಯ್ಯನ ಹೊಲದಿಂದ ಬಸಯ್ಯನ ಹೊಲದವರೆಗೆ ನಾಲಾ ಅಭಿವೃದ್ಧಿ, ಚಿಕಲ್ಪರ್ವಿ ಗ್ರಾಮದ ಸೀನಪ್ಪ ಹೊಲದಿಂದ ಕೊಡಗಿಡ್ಡ ಹಳ್ಳದವರೆಗೆ ಕೈಗೊಂಡ ನಾಲಾ ಅಭಿವೃದ್ಧಿ ಕಾಮಗಾರಿ ಹಾಗೂ ಅಳತೆ ಪ್ರಮಾಣ ಪರಿಶೀಲಿಸಿದರು. ಪೋತ್ನಾಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಜೀನೂರು ಕ್ಯಾಂಪಿನ ರಸ್ತೆಯಿಂದ ನರಸಯ್ಯನ ಹೊಲದವರೆಗೆ ನಾಲಾ ಹೂಳು ಎತ್ತುವ ಕಾಮಗಾರಿಯ ಕಡತಗಳನ್ನು ಪರಿಶೀಲನೆ ನಡೆಸಿ ಕಾಮಗಾರಿ ಗುಣಮಟ್ಟ ಪರಿಶೀಲಿಸಿದರು. ತಾ.ಪಂ. ಇ.ಓ.ಖಾಲೀದ್ ಅಹ್ಮದ್ , ಮದ್ಲಾಪುರ್ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಅಸ್ರಾ ಜಬೀನಾ ಖಾನ್ ಮತ್ತು ಪೋತ್ನಾಳ್ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಅಕ್ತರ ಪಾಷ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದ್ದಿರು.

### ಪೌರಕಾರ್ಮಿಕರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಆಯೋಗದ ಅಧ್ಯಕ್ಷ ಪಿ.ರಘು ಸಲಹೆ

## ಮಕ್ಕಳಿಗೆ ಶಿಕ್ಷಣ ಕೊಡಿಸಲು ಪೌರ ಕಾರ್ಮಿಕರಿಗೆ ಸಲಹೆ



ಯುವಮಾರ್ಗ ಸುದ್ದಿ

**ರಾಯಚೂರು ಫೆ.19–** ಸಫಾಯಿ ಕರ್ಮಚಾರಿಗಳ ಹಾಗೂ ಪೌರ ಕಾರ್ಮಿಕರ ಸಮಸ್ಯೆಗಳು ಮತ್ತು ಅವರ ಕುಂದು ಕೊರತೆಗಳನ್ನು ಸರ್ಕಾರಕ್ಕೆ ಮುಟ್ಟಿಸುವ ಮತ್ತು ಪರಿಹರಿಸುವ ಉದ್ದೇಶವನ್ನು ಸಫಾಯಿ ಕರ್ಮಚಾರಿಗಳ ಆಯೋಗವು ಹೊಂದಿದೆ. ಪೌರಕಾರ್ಮಿಕರು ತಾವು ಸಮಾಜದಲ್ಲಿ ಎಲ್ಲರಂತೆ ಇರಬೇಕು ಎಂಬ ಭಾವನೆಯನ್ನು ಇಟ್ಟುಕೊಂಡು ಮಕ್ಕಳನ್ನೂ ಶಿಕ್ಷಣವಂತರನ್ನಾಗಿ ಮಾಡಲು ಶ್ರಮಿಸಬೇಕೆಂದು ಸಫಾಯಿ ಕರ್ಮ ಚಾರಿಗಳ ಆಯೋಗದ ಅಧ್ಯಕ್ಷ ಪಿ.ರಘು ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಫೆ.19ರಂದು ಹಮ್ಮಿಕೊಂಡಿದ್ದ ಪೌರಕಾರ್ಮಿಕರೊಂದಿಗೆ ಸಂವಾದ ಕಾರ್ಯಕ್ರಮ ಹಾಗೂ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪೌರಕಾಮಿಕರು ತಾವು ಸಮಾಜದಿಂದ ದೂರು ಇದ್ದೇವೆ ಎಂಬ ಭಾವನೆಯನ್ನು ಬಿಡಬೇಕು. ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಬೇಕ. ಸರಿಯಾಗಿ ನೋಡಿಕೊಳ್ಳಲು ಮುಂದಾಗಬೇಕು ಎಂದರು.

ಇದೇ ವೇಳೆ ಪೌರಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಎಸ್.ಮಾರೆಪ್ಪ ಮಾತನಾಡಿ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನೇರ ಪಾವತಿಯಡಿ ಕಾರ್ಯನಿರ್ವಹಿಸುತ್ತಿದ್ದ, ಮೃತ ಹೊಂದಿದ ಪೌರಕಾರ್ಮಿಕರ ಮಾಹಿತಿಯನ್ನು ತಪ್ಪಾಗಿ ದಾಖಲಿಸಲಾಗಿದ್ದು, ಇದನ್ನು ಮರುಪರಿಶೀಲಿಸಬೇಕು. ಮತ್ತು ಮೃತ ಪೌರಕಾರ್ಮಿಕರ ಕುಟುಂಬಕ್ಕೆ ಪರಿಹಾರ ಮತ್ತು ಸೌಲಭ್ಯಗಳನ್ನು ಒದಗಿಸಬೇಕೆಂದು ತಿಳಿಸಿದರು.

ದಲಿತ ಸಮರ ಸೇನೆಯ ರಾಜ್ಯ ವಿಭಾಗೀಯ ಸಂಚಾಲಕ ನೀಲಕಂಠ(ಅನಿಲ್) ಮಾತನಾಡಿ, ಸಪಾಯಿ ಕರ್ಮಚಾರಿಗಳಿಗೆ ಮೂಲಭೂತ ಸೌಲಭ್ಯಗಳು ಮತ್ತು ಕಡ್ಡಾಯವಾಗಿ ಆಯಾ ಸ್ಥಳೀಯ ಸಂಸ್ಥೆಗಳಿಂದ ಗುರುತಿನ ಚೀಟಿಯನ್ನು ಒದಗಿಸಬೇಕು. ಇದರಿಂದ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುತ್ತದೆ ಎಂದು ಸಲಹೆ ಮಾಡಿದರು.

ಇತರೆ ಪೌರಕಾರ್ಮಿಕರು ಮಾತನಾಡಿ, ವಾರಕ್ಕೊಂದು ದಿನ ಸಂಪೂರ್ಣ ರಜೆಯನ್ನು ನೀಡಬೇಕು. ರಾಯಚೂರು ನಗರದಿಂದ ಬೇರೆ ತಾಲೂಕುಗಳ ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ಮಾಡುವ ಪೌರಕಾರ್ಮಿಕರು ವಾರಕ್ಕೊಂದು ದಿನ ರಜೆ ಸಿಕ್ಕರೆ ಮನೆಗೆ ಹೋಗಿ ಬರಲು ಅನುಕೂಲವಾಗುತ್ತದೆ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಆಯೋಗದ ಕಾರ್ಯದರ್ಶಿ ಮಾದುಸ್ವಾಮಿ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ, ನಗರಸಭೆ ಪರಾಯುಕ್ತ ಈರಣ್ಣ ಬಿರಾದಾರ, ಪಾಲಿಕೆ ಉಪ ಆಯುಕ್ತರಾದ ಸಂತೋಷಿರಾಣಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಸಿಂಧೂ, ಪಾಲಿಕೆಯ ಅಧಿಕಾರಿ ಕೃಷ್ಣ ಶಾವಂತಗೇರಾ ಸೇರಿದಂತೆ ಅನೇಕರಿದ್ದರು.

## ಜಿಲ್ಲಾ ಎಸ್.ಸಿ. ಪ್ರದಾನ ಕಾರ್ಯದರ್ಶಿಯಾಗಿ ಸೀತಾರಾಮ ನಾಯ್ಕ್ ಆಯ್ಕೆ



ಯುವಮಾರ್ಗ ಸುದ್ದಿ

**ಅರಕೇರಾ,ಫೆ.19–** ರಾಜ್ಯಾದ್ಯಾಂತ ಸಂಘಟನಾ ಪರ್ವದ ಭಾಗವಾಗಿ ರಾಯಚೂರು ಜಿಲ್ಲೆಯ ಭಾರತೀಯ ಜನತಾ ಪಕ್ಷದ ವಿವಿಧ ಮೋರ್ಚಾಗಳ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳಾಗಿ ನಿಯುಕ್ತಿ ಮಾಡಲಾಗಿದೆ. ಎಂದು ಜಿಲ್ಲಾ ಅಧ್ಯಕ್ಷರು ವೀರನಗೌಡ ಬಿ. ಪಾಟೀಲ್ ಲೆಕ್ಕಿಹಾಳ ತಿಳಿಸಿದ್ದಾರೆ.

ಸೀತಾರಾಮ ನಾಯ್ಕ್ ಬಿ.ಗಣೇಕಲ್ ಅವರನ್ನು ಜಿಲ್ಲಾ ಎಸ್.ಸಿ. ಪ್ರದಾನ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದು ಬಿ.ಜೆ.ಪಿ.ಯ ಮುಖಂಡರು ಹರ್ಷ ವ್ಯಕ್ತಪಡಿಸಿದರು ಮತ್ತು ಅಭಿನಂದನೆಗಳನ್ನು ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111,
9743496111

## ಮಾನ್ವಿ: ಸಾಹಿತ್ಯ ಸಮ್ಮೇಳನಾಧ್ಯಕ್ಷ ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರುಗೆ ಚುಟುಕು ಸಾಹಿತ್ಯ ಪರಿಷತ್ತಿನಿಂದ ಸನ್ಮಾನ

ಯುವಮಾರ್ಗ ಸುದ್ದಿ

**ಮಾನ್ವಿ,ಫೆ.19–** ಫೆ.28ರಂದು ನಡೆಯಲಿರುವ 11ನೇ ತಾಲೂಕ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾದ ಹಿರಿಯ ಸಾಹಿತಿ,ಬರಹಗಾರರಾದ ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರು ಅವರನ್ನು ಚುಟುಕು ಸಾಹಿತ್ಯ ಪರಿಷತ್ತು ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ಬುಧವಾರ ಸಂಜೆ ಪಟ್ಟಣದ ಕಲ್ಯಾಣ ವೈದ್ಯಾಲಯದಲ್ಲಿ ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಮೊಹಮ್ಮದ್ ಮುಜೀಬ್, ಗೌರವಾಧ್ಯಕ್ಷರಾದ



ಮಹಾದೇವಪ್ಪ ಅವರ ನೇತೃತ್ವದಲ್ಲಿ ಪದಾಧಿಕಾರಿಗಳು ಫೆ.28ರಂದು ನಡೆಯಲ್ಲಿರುವ ತಾಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾದ ಹಿರಿಯ ಸಾಹಿತಿ ಡಾ.ಬಸವಪ್ರಭು ಪಾಟೀಲ ಬೆಟ್ಟದೂರು ಹಾಗೂ ಅವರ ಧರ್ಮಪತ್ನಿ ಅವರನ್ನು ಅಭಿನಂದಿಸಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಚುಸಾಪ ಉಪಾಧ್ಯ ಕ್ಷರಾದ ಡಾ. ಬಸವರಾಜ್ ಸುಂಕೇಶ್ವರ್, ರಾಮಪ್ಪ ಹೊಳೆಪ್ಪನವರ್ ಆಂಜನೇಯ ನಾಯಕ ನಸಲಾಪುರ ಖಜಾಂಚಿ ಎಂಆರ್ ವೆಂಕಯ್ಯ ಶೆಟ್ಟಿ , 2ನೇಪುಟಕ್ಕೆ

# ಮೊದಲನೇಯ ಪುಟದಿಂದ

## ಯಶಸ್ವಿನಿ ಆರೋಗ್ಯ ಯೋಜನೆಯ ಮಹತ್ವ ಕುರಿತು ತರಬೇತಿ

ಬಗ್ಗೆ ತಿಳಿಸಿ, ತರಬೇತಿಯಲ್ಲಿ ಭಾಗವಹಿಸಿ, ನೀಡುವ ಮಾಹಿತಿಯನ್ನು ತಮ್ಮ ಸಂಘದಲ್ಲಿ ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಅತಿಥಿ ಉಪನ್ಯಾಸಕರಾದ ಪ್ರವೀಣಕುಮಾರ ಸಮನ್ವಯಾಧಿಕಾರಿಗಳು ಯಶಸ್ವಿನಿ ಟ್ರಸ್ಟ್ ಅವರು ಯಶಸ್ವಿನಿ ಆರೋಗ್ಯ ಯೋಜನೆಯ ನೋಂದಣಿ, ಯೋಜನೆಯ ಮಹತ್ವ ಮತ್ತು ಯೋಜನೆಯಡಿ ದೊರೆಯುವ ವಿಶೇಷ ಸೌಲಭ್ಯಗಳು ಮತ್ತು ಆನ್ ಲೈನ್ ಎಂಟ್ರಿ ಕುರಿತು ಮಾಹಿತಿ ನೀಡಿದರು.

ಇನ್ನೋರ್ವ ಉಪನ್ಯಾಸಕರಾದ ವೀರೇಶ್ ಹಿರೇಮಠ ಮುಖ್ಯಕಾರ್ಯನಿರ್ವಹಣಾಧಿಕಾರಿ ಬ್ರಮರಾಂಭ ಪತ್ತಿನ ಸೌಹಾರ್ದ ಸಹಕಾರ ಸಂಘ ಮಸ್ಕಿ ಇವರು ಸೈಬರ್ ಅಪರಾಧಗಳು, ನಿಯಂತ್ರಣ ಮತ್ತು ಮುನ್ನೆಚ್ಚರಿಕೆ ಕ್ರಮಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಘನಮಠದಯ್ಯ ಸಲಹೆಗಾರರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಜಿಲ್ಲಾ ಒಕ್ಕೂಟ ಇವರು ಸಹಕಾರ ಪಿತಾಮಹ ಸಿದ್ದನಗೌಡ ಸಣ್ಣರಾಮನಗೌಡ ಪಾಟೀಲ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದರು. ಮುಖ್ಯಅತಿಥಿಗಳಾಗಿ, ಎಂ. ಸತ್ಯನಾರಾಯಣ ಪ್ರಭಾರ ವ್ಯವಸ್ಥಾಪಕರು ಕೆ.ಎಫ್. ಸಿಂಧನೂರು, ಗಂಗಾಧರ ಸಿ.ಡಿ.ಒ. ಲಿಂಗಸೂಗೂರು, ಮುದಸಿರ್ ಸಿ.ಡಿ.ಒ. ಮಸ್ಕಿ, ಹೀರೋಜಿ ಸಿ.ಡಿ.ಒ. ಸಿಂಧನೂರು, ನಾಗಪ್ಪ ವಿಸ್ತೀರ್ಣಾಧಿಕಾರಿ ಕೆ.ಎಂ.ಎಫ್. ಲಿಂಗಸೂಗೂರು, ಶಿವರಾಜ್ ನೀರೀಕ್ಷಕರು, ಎ.ಆರ್.ಸಿ.ಎಸ್. ಕಛೇರಿ ಸಿಂಧನೂರು ಹಾಗೂ ಮಂಜುನಾಥ ಜಿ. ವ್ಯವಸ್ಥಾಪಕರು ಬಿ.ಎಂ.ಸಿ. ಕೇಂದ್ರ ಮುದಗಲ್ ಮುಂತಾದವರು ಉಪಸ್ಥಿತರಿದ್ದರು.

ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಜಿಲ್ಲಾ ಸಹಕಾರ ಒಕ್ಕೂಟದ ಜಿಲ್ಲಾ ಸಹಕಾರ ಶಿಕ್ಷಕರಾದ ಮಂಜುಳಾ ಸ್ವಾಗತಿಸಿದರು. ಒಕ್ಕೂಟದ ಮುಖ್ಯಕಾರ್ಯನಿರ್ವಹಣಾಧಿಕಾರಿ ಗಾಯತ್ರಿ ವೈ. ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಸಹಕಾರ ಶಿಕ್ಷಕರಾದ ಕು॥ ಅಶ್ವಿನಿ ಕೆ. ನಿರೂಪಿಸಿದರೆ ಒಕ್ಕೂಟದ ವ್ಯವಸ್ಥಾಪಕ ಮಲ್ಲಿಕಾರ್ಜುನ ಎಂ. ಅಮ್ಮಿನಭಾವಿ ವಂದಿಸಿದರು.

ಕಾರ್ಯಕ್ರಮದಲ್ಲಿ ಸಿಂಧನೂರು ಉಪವಿಭಾಗದ (ಸಿಂಧನೂರು, ಲಿಂಗಸಗೂರು ಹಾಗೂ ಮಸ್ಕಿ ತಾಲೂಕುಗಳ) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಮತ್ತು ಎಲ್ಲಾ ವಿವಿಧ ಸಹಕಾರ ಸಂಘಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

## ಮಾನ್ವಿ: ಸಾಹಿತ್ಯ ಸಮ್ಮೇಳನಾಧ್ಯಕ್ಷ ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರುಗೆ ಚುಟುಕು ಸಾಹಿತ್ಯ ಪರಿಷತ್ತಿನಿಂದ ಸನ್ಮಾನ

ಜಂಟಿ ಕಾರ್ಯದರ್ಶಿ ಶ್ರೀನಿವಾಸ್ ವೈ ಶಿಕ್ಷಕರು ಕುಮಾರಿ ಭಾರ್ಗವಿ ದೇಸಾಯಿ, ಕಚೇರಿ ಕಾರ್ಯದರ್ಶಿ ಶಿವಕುಮಾರ್ ಸಜ್ಜನ್, ಗೌರವ ಸಲಹೆಗಾರ ಜೆ.ಪಿ.ಅಂಬರೀಶ್, ಕಾನೂನು ಸಲಹೆಗಾರರು ವಿಶ್ವನಾಥ್ ಬಿ ನಂದಿಹಾಳ್ ವಕೀಲರು, ಮನೋಹರ್ ವಿಶ್ವಕರ್ಮ ವಕೀಲರು,

ಕಾರ್ಯಕಾರಿ ಸಮಿತಿ ಸದಸ್ಯರು ಬಿ, ಚನ್ನಬಸಯ್ಯಸ್ವಾಮಿ, ಯಮುನಪ್ಪ ಮುಖ್ಯ ಗುರುಗಳು, ಗೋವಿಂದ್ ರಾಜ್ ಪತ್ರಕರ್ತರು, ಉಮೇಶಯ್ಯ, ಟಿ .ಸಿ.ಚೆನ್ನರೆಡ್ಡಿ ನಿವೃತ್ತ ಪಿಡಿಒ, ಡಿಜಿ ಕರ್ಕೀಹಳ್ಳಿ ಸರ್ವಮಂಗಳ,ಶರಣಬಸವ, ಸಂಜೀವಪ್ಪ ಚಲವಾದಿ ಶಿಕ್ಷಕರು, ಗೌರವಸಲಹೆಗಾರು,ನವೀನ್ ಪತ್ರ ಕರ್ತರು, ಅಶ್ವಿನಿ ಶಿಕ್ಷಕಿ, ಮಧುಪಾಂಡೆ ನಿವೃತ್ತ ಶಿಕ್ಷಕಿ, ಶಿವಕುಮಾರ್ ಚಲ್ಮಲ್ ಡಾ.ಚನ್ನಬಸವ ಮಾಡಗಿರಿ, ಶರಣಬಸವ ಪೂಜಾರಿ ಸೇರಿದಂತೆ ಅನೇಕರಿದ್ದರು.

## ಕೆಲಸ ಕಳೆದುಕೊಂಡ ಸಫಾಯಿ ಕರ್ಮಚಾರಿಗಳ ಮರುನೇಮಕಕ್ಕೆ ಆದೇಶ

### ರಿಮ್ಸಗೆ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ಪಿ. ರಘು ಭೇಟಿ; ಪರಿಶೀಲನೆ

ಸಂಬಂಧಪಟ್ಟ ಸೂಪರ್‌ವೈಸರಗಳಿಗೆ ಕೂಡಲೇ ನೊಟೀಸ್ ಜಾರಿ ಮಾಡಿ ಶಿಸ್ತುಕ್ರಮ ಜರುಗಿಸಿ ಎಂದು ರಿಮ್ಸ್ ನಿರ್ದೇಶಕರಿಗೆ ನಿರ್ದೇಶನ ನೀಡಿದರು.

ಇಲ್ಲವಾದರೆ ರಿಮ್ಸ್ ನಿರ್ದೇಶಕರು ಸೇರಿ ಎಲ್ಲರ ವಿರುದ್ಧ ಶಿಸ್ತಿನ ಕ್ರಮ ಜರುಗಿಸಲಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು. ಈ ಘಟನೆಗೆ ಸಂಬಂಧಿಸಿದಂತೆ ಪ್ರಶ್ನಿಸಲು ಹೋದ 7 ಜನ ಸ್ವಚ್ಛತಾ ಸಿಬ್ಬಂದಿಯನ್ನು ಕೆಲಸದಿಂದ ತೆಗೆದು ಹಾಕಿದ ಕುರಿತು ಮಾಹಿತಿ ಬಂದಿದೆ.

ಯಾವುದೇ ಕಾರಣಕ್ಕೂ ಕರ್ಮಚಾರಿಗಳ ಹೊಟ್ಟೆ ಮೇಲೆ ಹೊಡೆಯಬಾರದು. ಅಮಾನತುಗೊಳಿಸಿದ ಅಥವಾ ವರ್ಗಾವಣೆ ಮಾಡಿದ ಎಲ್ಲ ಸಫಾಯಿ ಕರ್ಮಚಾರಿಗಳನ್ನು ತಕ್ಷಣವೇ ಮರುನೇಮಕ ಮಾಡಿಕೊಳ್ಳಬೇಕು ಎಂದು ಆಸ್ಪತ್ರೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗುತ್ತಿಗೆ ಆಧಾರದಲ್ಲಿ ನೇಮಿಸಿಕೊಂಡ ಸ್ವಚ್ಛತಾ ಸಿಬ್ಬಂದಿಗೆ ಪ್ರತಿ ವರ್ಷ ನವೀಕರಣ ಮಾಡಿಕೊಳ್ಳಲು ರಿಮ್ಸನ ಕೆಲ ಅಧಿಕಾರಿಗಳು ಲಂಚದ ಬೇಡಿಕೆ ಇಟ್ಟಿರುವ ಬಗ್ಗೆ ದೂರುಗಳಿವೆ. ಇದು ಮುಂದುವರೆಯಬಾರದು ಎಂದು ಎಚ್ಚರಿಕೆ ನೀಡಿದರು. ಮತ್ತು ಈ ಬಗ್ಗೆ ತನಿಖೆ ಕೈಗೊಂಡು ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

ಅಹವಾಲು ಆಲಿಕೆ:

ಅಧ್ಯಕ್ಷರು, ಇದೆ ವೇಳೆ ಕಾರ್ಮಿಕರ ಅಹವಾಲು ಆಲಿಸಿದರು. ಸಫಾಯಿ ಕರ್ಮಚಾರಿಗಳ ಹಕ್ಕುಗಳನ್ನು ರಕ್ಷಿಸುವುದು ಆಯೋಗದ ಮೊದಲ ಆದ್ಯತೆಯಾಗಿದೆ. ಅರ್ಹ ಕಾರ್ಮಿಕರಿಗೆ ನ್ಯಾಯ ಸಿಗುವವರೆಗೆ ನಾವು ವಿಶ್ರಮಿಸುವುದಿಲ್ಲ. ಸಫಾಯಿ ಕರ್ಮಚಾರಿಗಳ ಹಿತರಕ್ಷಣೆಗೆ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆಯೋಗದ ಕಾರ್ಯದರ್ಶಿ ಮಾಧುಸ್ವಾಮಿ, ರಿಮ್ಸ್ ನಿರ್ದೇಶಕ ಡಾ.ರಮೇಶ, ಡಾ.ಎಂ.ಬಸವರಾಜ, ಪ್ರಮುಖರಾದ ಕಡಗೋಲ ಚೇತನ, ಪ್ರಸಾದ ಭಂಡಾರಿ, ಸೇರಿದಂತೆ ಅನೇಕರಿದ್ದರು.

## ಕುಖ್ಯಾತ ಬೈಕ್ ಕಳ್ಳರ ಬಂಧನ:12.60 ಲಕ್ಷ ರೂ.ಮೌಲ್ಯದ 14 ಬೈಕ್ ವಶ

**ಕಲಬುರಗಿ,ಫೆ.19–**ನಗರದ ಸಬ್–ಅರ್ಬನ್ ಪೊಲೀಸರು ಇಬ್ಬರು ಅಂತರರಾಜ್ಯ ಕುಖ್ಯಾತ ಬೈಕ್ ಕಳ್ಳರನ್ನು ಬಂಧಿಸಿ 12.60 ಲಕ್ಷ ರೂ.ಮೌಲ್ಯದ 14 ಬೈಕ್‌ಗಳನ್ನು ವಶಪಡಿಸಿಕೊಂಡು ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು. ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಮನೆ ಮುಂದೆ ನಿಲ್ಲಿಸಿದ ಬೈಕ್ ಕಳವಾಗಿದೆ ಎಂದು ನಗರದ ಮಹಾಲಕ್ಷ್ಮೀ ಲೇಔಟ್‌ನ ರೋಹಿತ್ ಕೋಲಾರ್ಕರ್ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ಈ ದೂರಿನ ಅನ್ವಯ ನಗರ ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ, ಡಿಸಿಪಿ ಪ್ರವೀಣ್ ಹೆಚ್.ನಾಯಕ್ ಮತ್ತು ಸಬ್–ಅರ್ಬನ್ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಬಸವೇಶ್ವರ ಹೀರಾ ಅವರ ಮಾರ್ಗದರ್ಶನದಲ್ಲಿ ಸಬ್–ಅರ್ಬನ್ ಪೊಲೀಸ್ ಠಾಣೆ ಪಿಐ ನಟರಾಜ ಲಾಡೆ ಅವರ ನೇತೃತ್ವದಲ್ಲಿ ಪಿಎಸ್‌ಐ ಶಶಿಕಲಾ, ಸಿಬ್ಬಂದಿಗಳಾದ ವೆಂಕಟರೆಡ್ಡಿ, ಮಲ್ಲಿಕಾರ್ಜುನ, ಸುಲ್ತಾನ್, ಮಂಜುನಾಥ, ಫಿರೋಜ್, ಅನೀಲ ಮತ್ತು ಹಣಮಂತ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಈ ತಂಡ ತನಿಖೆ ನಡೆಸಿ ನಗರದ ಕಪನೂರ ಇಂಡಸ್ಟ್ರಿಯಲ್



ಏರಿಯಾದಲ್ಲಿ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ನಗರದ ಮೋಮಿನಪುರ ಗೋಳಾ ಚೌಕ್‌ನ ಮೊಹ್ಮದ್ ನಾಸೀರ್ (24) ಮತ್ತು ಮಿಲ್ಲತ್ ನಗರದ ಮಹ್ಮದ್ ಆರೀಫ್ (19) ಅವರನ್ನು ಬಂಧಿಸಿ 12.60 ಲಕ್ಷ ರೂ.ಮೌಲ್ಯದ ವಿವಿಧ ಕಂಪನಿಯ 14 ಬೈಕ್ ಗಳನ್ನು ಜಪ್ತಿ ಮಾಡಿ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ ಎಂದು ತಿಳಿಸಿದರು.

ಅಂತರರಾಜ್ಯ ಕುಖ್ಯಾತ ಬೈಕ್ ಕಳ್ಳರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.

## ಕಾಂಗ್ರೆಸ್ ಸರ್ಕಾರ ಕಿತ್ತೊಗೆಯಲು ಬಿಜೆಪಿ ಸಂಕಲ್ಪ

ಮಾಡುತ್ತಿದೆ. ಕಾಂಗ್ರೆಸ್ ಪಕ್ಷ ಮಾನಸಿಕವಾಗಿ, ಬೌದಿಕವಾಗಿ ದಿವಾಳಿಯಾಗಿದೆ. ಕರ್ನಾಟಕದಲ್ಲೂ ಕಾಂಗ್ರೆಸ್ ಸರ್ಕಾರ ದಿವಾಳಿಯಾಗಿದೆ. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್‌ನ್ನು ಸೋಲಿಸೋಣ. ಈ ಭ್ರಷ್ಟ ಸರ್ಕಾರದ ಮುಖಕ್ಕೆ ಹೊಡೆದು ಓಡಿಸೋಣ ಎಂದು ಹೇಳಿದರು.

ದೆಹಲಿಯಲ್ಲಿ ಎಐ ಶೃಂಗಸಭೆ ನಡೆಯುತ್ತಿದೆ. ಆದರೆ ಇಲ್ಲಿ ಹೆಚ್ಚಿನ ಕಂಪನಿಗಳು ಬೆಂಗಳೂರು ಮೂಲದವು. ಇದು ಕರ್ನಾಟಕದ ಶಕ್ತಿ. ಕರ್ನಾಟಕದಷ್ಟು ಸಮೃದ್ಧ, ಸಾಂಸ್ಕೃತಿಕ ಪ್ರದೇಶ ಬೇರೆ ಇಲ್ಲ. ಇಂತಹ ರಾಜ್ಯದಲ್ಲಿ ಕಾಂಗ್ರೆಸ್‌ನಂತಹ ಭ್ರಷ್ಟ ಸರ್ಕಾರ ಇದೆ. ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ದೂರಿದರು.

ರಾಜ್ಯದಲ್ಲಿ ಮತ್ತೆ ಬಿಜೆಪಿ: ರಾಧಾ ಮೋಹನ್‌ದಾಸ್

ಮುಂದಿನ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿ ಗೆಲ್ಲಲಿದೆ. ಮತ್ತೆ ಕರ್ನಾಟಕದಲ್ಲಿ ಬಿಜೆಪಿ ಸರ್ಕಾರ ಸ್ಥಾಪನೆಯಾಗಲಿದೆ ಎಂದು ರಾಜ್ಯ ಬಿಜೆಪಿ ಉಸ್ತುವಾರಿ, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾ ಮೋಹನದಾಸ ಅಗರವಾಲ್ ಇದೇ ಸಂದರ್ಭದಲ್ಲಿ ಮಾತನಾಡುತ್ತಾ ಹೇಳಿದರು.

ಅನ್ಯ ರಾಜ್ಯಗಳ ಚುನಾವಣೆಗಳಿಗಾಗಿ ಕರ್ನಾಟಕದಲ್ಲಿ ಕಾಂಗ್ರೆಸ್ ಲೂಟಿ ಮಾಡುತ್ತಿದೆ. ಬೇರೆ ಚುನಾವಣೆಗೆ ರಾಜ್ಯದಿಂದ ಹಣ ಹೋಗುತ್ತಿದೆ. ಕಾಂಗ್ರೆಸ್ ಸರ್ಕಾರದಿಂದ ಜನ ಬೇಸತ್ತಿದ್ದಾರೆ. ಜನರಿಗೂ ತಪ್ಪಿನ ಅರಿವಾಗಿದೆ. ನಾವು ಜೆಡಿಎಸ್ ಜತೆ ಮೈತ್ರಿಯಲ್ಲಿದ್ದೇವೆ. ಎರಡೂ ಪಕ್ಷಗಳೂ ಒಟ್ಟಾಗಿ ಸರ್ಕಾರ ಕಿತ್ತೊಗೆಯುವ ಕೆಲಸ ಮಾಡುತ್ತವೆ ಎಂದರು.

ನಮ್ಮ ಪಕ್ಷದಲ್ಲೂ ಗೊಂದಲಗಳಿವೆ ನಿಜ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವೆ ಇರುವಷ್ಟು ಸಂಘರ್ಷ ನಮ್ಮಲ್ಲಿ ಇಲ್ಲ ಎಂದರು

ಕಾಂಗ್ರೆಸ್ ಸರ್ಕಾರ ಮುಸ್ಲಿಂರ ಪರ ಇದೆ. ಮುಸ್ರಿಂರ ಓಲೈಕೆ ನಡೆದಿದೆ. ರೋಹಿತ್ ವೆಮುಲಾ ಮಸೂದೆ ತಂದು ದಲಿತರಿಗೆ ಸಂಕಷ್ಟ ಸೃಷ್ಟಿಸುವ ಕೆಲಸ ನಡೆದಿದೆ ಎಂದು ದೂರಿದರು

ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಜಮೀರ್ ಅಹಮದ್ ಖಾನ್ ಸೇರಿದಂತೆ ಹಲವರ ಮೇಲೆ ಪ್ರಕರಣಗಳಿವೆ ಎಂದು ಅವರು ಆರೋಪಿಸಿದರು.

ಅಭಿನಂದನಾ ನಿರ್ಣಯ

ಈ ಕಾರ್ಯಕಾರಣಿಯಲ್ಲಿ ರಾಜ್ಯ ರಾಜಕಾರಣದಲ್ಲಿ 50 ವರ್ಷ ಪೂರೈಸಿರುವ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಅಭಿನಂದಿಸುವ ನಿರ್ಣಯವನ್ನು ಕೈಗೊಳ್ಳಲಾಯಿತು.

ಈ ಕಾರ್ಯಕಾರಣಿಯಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ವಿರೋಧ ಪಕ್ಷದ ನಾಯಕರುಗಳಾದ ಆರ್.ಅಶೋಕ್, ಚಲವಾದಿ ನಾರಾಯಣಸ್ವಾಮಿ, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ವಿ. ಸೋಮಣ್ಣ, ಶೋಭಾಕರಂದ್ಲಾಜೆ, ಮಾಜಿ ಮುಖ್ಯಮಂತ್ರಿಗಳಾದ ಯಡಿಯೂರಪ್ಪ, ಸದಾನಂದಗೌಡ, ಜಗದೀಶ್‌ಶೆಟ್ಟರ್ ಸೇರಿದಂತೆ ಬಿಜೆಪಿಯ ಎಲ್ಲ ಪ್ರಮುಖ ನಾಯಕರು, ಶಾಸಕರು, ಸಂಸದರು ಪಾಲ್ಗೊಂಡಿದ್ದರು.

## ಕಸ ಬಿಜೆಪಿ ನಾಯಕರೇ ಇಟ್ಟುಕೊಳ್ಳಲಿ–ಡಿಕೆಶಿ ಕಿಡಿ

**ಬೆಂಗಳೂರು, ಫೆ.19–** "ಬಿಜೆಪಿ ನಾಯಕರುಗಳು ಕಸ ವಿಲೇವಾರಿಗೆ ಬಿಡುವುದು ಬೇಡ. ಅವರೇ ಕಸವನ್ನು ಇಟ್ಟುಕೊಳ್ಳಲಿ. ಯಾರು ಬಿಡುವುದಿಲ್ಲವೋ ಅವರ ಕ್ಷೇತ್ರದಲ್ಲಿ ಕಸವನ್ನೇ ತೆಗೆಯುವುದಿಲ್ಲ, ತೆಗೆಸುವುದಿಲ್ಲ. ಆಗ ಜನರೇ ಅವರಿಗೆ ಉಗಿಯುತ್ತಾರೆ. ಮೈಕ್ ಹಾಕಿ ಪ್ರಚಾರ ಮಾಡಿಸುತ್ತೇನೆ. ಕಾಲನ್ನು ಕಟ್ಟಿಕೊಳ್ಳಲು ಆಗುತ್ತದೆಯೇ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಆಕ್ರೋಶ ವ್ಯಕ್ತಪಡಿಸಿದರು.



ಅಸ್ಸಾಂ ರಾಜ್ಯಕ್ಕೆ ತೆರಳುವುದಕ್ಕೆ ಮುನ್ನ ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಜೊತೆ ಮಾತನಾಡಿದ ಸಂದರ್ಭದಲ್ಲಿ

ಏನಾದರೂ ಕಸ ವಿಲೇವಾರಿಗೆ ಬಿಡುವುದಿಲ್ಲ ಎನ್ನುವ ಬಿಜೆಪಿ ನಾಯಕರ ಹೇಳಿಕೆ ಬಗ್ಗೆ ಕೇಳಿದಾಗ, "ಕಸವನ್ನು ಎಲ್ಲಾದರೂ ಒಂದು ಕಡೆ ಹಾಕಬೇಕಲ್ಲವೇ? ಕಸ ಯಾರದ್ದು ಅದು ಜನರ ಕಸ. ಮೊದಲಿನಿಂದಲೂ ಹೇಗೆ ಸಂಪ್ರದಾಯವಿತ್ತೋ ಅದೇ ರೀತಿ ಮಾಡಿಕೊಂಡು ಬರುತ್ತಿದ್ದೇವೆ. ಬಿಜೆಪಿ ಹಾಗೂ ನಮ್ಮ ಸಮಯದಲ್ಲಿ ತೀರ್ಮಾನ ಮಾಡಿದ್ದು ಇದೇ ರೀತಿ" ಎಂದರು.

"ನಾವು ಅಭಿವೃದ್ಧಿಗೆ ಹಣ ಕೊಟ್ಟಿದ್ದೇವೆ. ಸಾವಿರಾರು ಕೋಟಿಯನ್ನು ಎಷ್ಟು ಎಂದು ಕೊಡಲು ಆಗುತ್ತದೆ. 20, 30 ಕೋಟಿ ಸೇರಿದಂತೆ 50– 100 ಕೋಟಿ ಹಣವನ್ನು ಅಭಿವೃದ್ಧಿಗೆ ಕೊಡುತ್ತಾ ಬಂದಿದ್ದೇವೆ. ನಾವು ಕೊಡುತ್ತೇವೆ. ಅವರು ಅರ್ಥ ಮಾಡಿಕೊಳ್ಳಬೇಕು. ಮಹದೇವಪುರದಲ್ಲಿ ಕಸ ವಿಲೇವಾರಿ ನಿಲ್ಲಿಸಲಾಗಿದೆ. ನಾವು ಸಹ ಅಲ್ಲಿನ ಕಸ ಮೂರು ದಿನ ತೆಗೆಯಬೇಡಿ ಎಂದರೆ ಏನಾಗಬಹುದು" ಎಂದರು.

"ಕಸ ವಿಲೇವಾರಿಗೆ ನಾಲ್ಕು ಕಡೆ ಜಮೀನುಗಳನ್ನು ನೋಡಿದ್ದೆವು. ಭೂಮಿ ಸಮಸ್ಯೆ ಬಂದ ಕಾರಣಕ್ಕೆ ಎರಡು ಕಡೆ ಅಂತಿಮ ಮಾಡಿದ್ದೇವೆ. ಟೆಂಡರ್ ಕೂಡ ಕರೆಯಲಾಗಿದೆ. ನಮ್ಮ ಕೆಲಸವನ್ನು ನಾವು ಮಾಡುತ್ತಿದ್ದೇವೆ" ಎಂದರು.

ಸಾರಿಗೆ ನೌಕರರ ಬೇಡಿಕೆಗಿಂತ ಕಡಿಮೆ ಹಿಂಬಾಕಿ ನೀಡಿರುವ ಬಗ್ಗೆ ಕೇಳಿದಾಗ, "ಸದ್ಯ ಅಷ್ಟು ಕೊಟ್ಟಿರುವುದಕ್ಕೆ ಸಂತೋಷ ಪಡಬೇಕು. ಸರ್ಕಾರದ ಪರಿಸ್ಥಿತಿಯನ್ನು ಅವರು ಅರ್ಥ ಮಾಡಿಕೊಳ್ಳಬೇಕು. ದಯವಿಟ್ಟು ಸಾರಿಗೆ ನೌಕರರು ಸಹಕಾರ ನೀಡಬೇಕು ಎಂದು ಮನವಿ ಮಾಡುತ್ತೇನೆ" ಎಂದು ಹೇಳಿದರು.

ಪ್ರಿಯಾಂಕಾ ಗಾಂಧಿ ಅವರ ಜೊತೆ ಅಸ್ಸಾಂ ಭೇಟಿ

ಪ್ರಿಯಾಂಕಾ ಗಾಂಧಿ ಅವರು, ನಾನು, ಭೂಪೇಶ್ ಬಘೇಲ ಅವರು ಹಾಗೂ ತಂಡ ಅಸ್ಸಾಂಗೆ ತೆರಳುತ್ತಿದ್ದೇವೆ. ಹಲವು ವಿಚಾರಗಳ ಕುರಿತು ಸರಣಿ ಸಭೆಗಳನ್ನು ನಡೆಸುತ್ತೇವೆ. ಅಸ್ಸಾಂ ಚುನಾವಣೆ ವಿಚಾರವಾಗಿ ದೆಹಲಿಯಲ್ಲಿ 3–4 ಸಭೆಗಳನ್ನು ನಡೆಸಿದ್ದೇವೆ. ಬೇಕಾದ ಮಾಹಿತಿಗಳನ್ನು ಪಡೆದುಕೊಂಡಿದ್ದೇವೆ. ತಂತ್ರಗಾರಿಕೆ ಸೇರಿದಂತೆ ಇನ್ನಿತರೇ ವಿಚಾರಗಳ ಬಗ್ಗೆ ಚರ್ಚೆ ನಡೆಸಲಾಗಿದೆ. ಈ ಬಾರಿ ಅಸ್ಸಾಂನಲ್ಲಿ ಬದಲಾವಣೆ ಆಗುತ್ತದೆ ಎನ್ನುವ ಭರವಸೆಯಿದೆ. ಕಾಮಾಕ್ಯ ದೇವಿ ದೇವಾಲಯಕ್ಕೂ ಭೇಟಿ ನೀಡುತ್ತೇನೆ. ಎರಡು ದಿನಗಳ ಪ್ರವಾಸ ಇದಾಗಿದೆ" ಎಂದು ಹೇಳಿದರು.

## ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ:ಕಂದಕೂರ



**ಸೈದಾಪುರ:ಫೆ.19:** ಬಂಜಾರ ಸಮುದಾಯದ ಜನರು ಶ್ರಮಜೀವಿಗಳಾಗಿದ್ದು, ಇದರಿಂದ ಆಸ್ತಿ ಮಾಡಿಕೊಳ್ಳಬಹುದು. ಜೊತೆಗೆ ನಿಮ್ಮ ಮಕ್ಕಳಿಗೆ ಹೆಚ್ಚಿನ ಶಿಕ್ಷಣ ನೀಡಿ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ ಎಂದು ಶಾಸಕ ಶರಣಗೌಡ ಕಂದಕೂರ ಅಭಿಪ್ರಾಯಪಟ್ಟರು. ಪಟ್ಟಣದಲ್ಲಿ ಬುಧವಾರ ಆಸ್ಪಲ್ಲಿ ಲೇಔಟ್‌ನಲ್ಲಿ ನಡೆದ ಸಂತ ಶ್ರೀ ಸೇವಲಾಲರ 287ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಯುವಕರು ಸೇವಲಾಲರ ಆಶಯದಂತೆ ದುಶ್ಚಟಗಳಿಂದ ದೂರವಿದ್ದು ಸ್ವಸ್ತ ಸಮಾಜದ ನಿರ್ಮಾಣದಲ್ಲಿ ಪ್ರಮುಖ ಪಾತ್ರವಹಿಸಬೇಕು. ಎಲ್ಲರಂತೆ ನಾವು ಎಂಬುದು ಸೇವಾಲಾಲರ ಕನಸನ್ನು ಒಟ್ಟೂಗೂಡಿಸಿ ಇತರರೊಡನೆ ಕೂಡಿ ಬಾಳುವುದನ್ನು ಕಲಿಯಬೇಕು. ಪ್ರತಿ ತಾಂಡಗಳಲ್ಲಿ ನ್ಯಾಯಬೆಲೆ ಅಂಗಡಿಗಳ ನಿರ್ಮಾಣ ಮತ್ತು ಕಂದಾಯ ಗ್ರಾಮಗಳನ್ನಾಗಿ ಪರಿವರ್ತನೆಗೆ ಸರ್ಕಾರದ ಮೇಲೆ ಒತ್ತಡ ಹೇರುವ ಮೂಲಕ ನಿಮ್ಮ ಪ್ರೀತಿ ವಿಶ್ವಾಸದಿಂದ ತಾಂಡಗಳ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಬಂಜಾರ ಸಮುದಾಯದ ಕಟ್ಟಕಡೆಯ ವ್ಯಕ್ತಿಯ ಕಣ್ಣೀರನ್ನು ಒರೆಸಲು ನಾನು ಸದಾ ನಿಮ್ಮ ಜೊತೆಗಿರುತ್ತೇನೆ ಎಂದು ಹೇಳಿದರು.

ಬಾಕ್ಸ್: ಸಂತ ಶ್ರೀ ಸೇವಾಲಾಲ ಮತ್ತು ಮಾರೆಮ್ಮ ದೇವಸ್ಥಾನ ನಿರ್ಮಾಣಕ್ಕೆ ಬದ್ಧ: ಸೈದಾಪುರ ಪಟ್ಟಣದಲ್ಲಿ ಬಂಜಾರ ಸಮುದಾಯದ ಬೇಡಿಕೆಯಂತೆ ನಿಮ್ಮ ಆರಾಧ್ಯ ದೈವ ಸಂತ ಶ್ರೀ ಸೇವಾಲಾಲ ಮತ್ತು ಮಾರೆಮ್ಮ ದೇವಸ್ಥಾನದ ನಿರ್ಮಾಣಕ್ಕೆ ಸಹಕಾರ ನೀಡುವುದರ ಜೊತೆಗೆ ನನ್ನವಧಿ ಪೂರ್ಣಗೊಳ್ಳುವ ಮುನ್ನವೇ ಉದ್ಘಾಟಿಸುವೆ ಎಂದು ಶಾಸಕ ಶರಣಗೌಡ ಕಂದಕೂರ ಹೇಳಿದರು.

ಇದಕ್ಕೂ ಮೊದಲು ಸೈದಾಪುರ ರೈಲು ನಿಲ್ದಾಣದಿಂದ ಬಸವೇಶ್ವರ ವೃತ್ತದ ಮಾರ್ಗವಾಗಿ ಲಕ್ಷ್ಮೀ ನಗರದವರೆಗೆ ಸೇವಾಲಾಲ್ ಮಾಹಾರಾಜರ ಪ್ರತಿಮೆಯ ಭವ್ಯ ಮೆರವಣಿಗೆ ಹಾಗೂ ಶೋಭಯಾತ್ರೆಯನ್ನು ವಿವಿಧ ವಾದ್ಯಗಳ ಹಾಗೂ ನೃತ್ಯದ ಮೂಲಕ ನೋಡುಗರ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ತೆಲಂಗಾಣದ ಮಾಜಿ ವಿಧಾನ ಪರಷತ್ತಿನ ಸದಸ್ಯ ರಾಮುಲು ನಾಯಕ, ಕಥಾ ವಾಚಕ ಎಸ್.ಪಿ.ನಾಯಕ, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಶರಣಿಕ ಕುಮಾರ ದೊಕಾ, ಚಂದ್ರಶೇಖರ ವಾರಾದ, ಬಸವಂತರಾಯಗೌಡ, ಚಂದ್ರುಗೌಡ, ನರಸಪ್ಪ ಕವಡೆ, ಗುರುನಾಥರೆಡ್ಡಿಗೌಡ, ಶ್ರೀದೇವಿ ಶೆಟ್ಟಿಹಳ್ಳಿ, ಸುನಿತಾಬಾಯಿ ಚವ್ಹಾಣ, ರಾಜೇಶ ಉಡುಪಿ, ವೆಂಕಟೇಶ ಗಡದ, ಸುರೇಶ ಮರಡಿ, ಸುಭಾಸ ಚಂದ್ರ ಕಟಕಟಿ, ಲಕ್ಷ್ಮಣ ನಾಯಕ ಕೂಡ್ಲೂರು, ಅರ್ಜುನ ಚವ್ಹಾಣ, ಭೀಮು ಚವ್ಹಾಣ, ಏಕನಾಥ ಚವ್ಹಾಣ, ಧರ್ಮರಾಜ ರಾಠೋಡ, ಕುಂದನ ಕುಮಾರ ಚವ್ಹಾಣ, ಅಂಬ್ರೇಶ ರಾಠೋಡ, ರಾಜು ಚವ್ಹಾಣ, ರವಿ ರಾಠೋಡ, ಕಾಶಿನಾಥ ಚವ್ಹಾಣ, ಗೋವಿಂದ ಚವ್ಹಾಣ, ವಿಶ್ವನಾಥ ಚವ್ಹಾಣ, ಸಂತೋಷ ಚವ್ಹಾಣ, ಬಾಲಾಜಿ ಚವ್ಹಾಣ, ರವಿಕಿಶನ, ಜಿತೇಂದ್ರ, ವೆಂಕಟೇಶ, ಅಜಯಕುಮಾರ ಗೊಬ್ರು, ವಿಷ್ಣು, ರಮೇಶ ಸೇರಿದಂತೆ ಇತರರಿದ್ದರು.

ಸಂತ ಸೇವಾಲಾಲ್ ಮಹಾರಾಜರ ಜೀವನ ಚರಿತ್ರೆ ಪಠ್ಯಪುಸ್ತಕದಲ್ಲಿ ಅಳವಡಿಸಿ ಅವರ ತತ್ವ ಆದರ್ಶಗಳು ಯುವಕರಿಗೆ ಮುಟ್ಟಿಸುವ ಕೆಲಸವಾಗಬೇಕು. ಬಂಜಾರ ಸಮೂದಾಯದವರು ಮತದಾನವನ್ನು ಮಾರಿಕೊಳ್ಳದೆ ಸಮಜಾದ ಪರವಾಗಿ ಕೆಲಸ ಮಾಡುವವರಿಗೆ ಬೆಂಬಲಿಸಬೇಕು.

ರಾಮುಲು ನಾಯಕ ತೆಲಂಗಾಣದ ಮಾಜಿ ವಿಧಾನ ಪರಷತ್ತಿನ ಸದಸ್ಯರು.

ಯುವ ಮಾರ್ಗ
www.yuvamarga.com Yuva Marga yuva_marga_

# ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಾರಿಗೆ ನೌಕರರ ಬೆಂಗಳೂರು ಚಲೋ

**ಬೆಂಗಳೂರು,ಫೆ.19–** 'ವೇತನ ಹೆಚ್ಚಳದ ಹಿಂಬಾಕಿ, ವೇತನ ಪರಿಷ್ಕರಣೆ ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯದ ನಾಲ್ಕೂ ರಸ್ತೆ ಸಾರಿಗೆ ಸಂಸ್ಥೆಗಳ ನೌಕರರು ಇಂದು ಬೆಂಗಳೂರು ಚಲೋ' ನಡೆಸಿದರು.

ಬಿಎಂಟಿಸಿ ಸೇರಿದಂತೆ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ನೂರಾರು ನೌಕರರು ಇಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೆಂಗಳೂರು ಚಲೋ ನಡೆಸಿ, ತಮ್ಮ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು.

ರಾಜ್ಯ ಸರ್ಕಾರ ಸಾರಿಗೆ ನಿಗಮಗಳ ನೌಕರರಿಗೆ 38 ತಿಂಗಳ ಹಿಂಬಾಕಿ ನೀಡಬೇಕು. ಮತ್ತು 2024ರ ಜನವರಿ 1 ರಿಂದ ಅನ್ವಯವಾಗುವಂತೆ ವೇತನ ಪರಿಷ್ಕರಣೆ ಮಾಡಬೇಕೆಂಬ ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಬೆಂಗಳೂರು ಚಲೋ ನಡೆಸಿದರು.ರಾಜ್ಯದ ಎಲ್ಲೆಡೆಯಿಂದ ಸಾರಿಗೆ ಸಂಸ್ಥೆಯ ನೌಕರರು ಬೆಂಗಳೂರಿಗೆ ಆಗಮಿಸಿ ಫ್ರೀಡಂ ಪಾರ್ಕ್‌ನಲ್ಲಿ ನಡೆದಿರುವ ಪ್ರತಿಭಟನೆಯಲ್ಲಿ ಪಾಲ್ಗೊಂಡು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ, ಘೋಷಣೆಗಳನ್ನು ಕೂಗಿದರು. ದೊಡ್ಡ ಸಂಖ್ಯೆಯಲ್ಲಿ ಸಾರಿಗೆ ನೌಕರರು ಸಮಾವೇಶಗೊಂಡು ತಮ್ಮ ಬೇಡಿಕೆಗಳ ಈಡೇರಿಕೆಗೆ ಹಕ್ಕೋತ್ತಾಯ ಮಂಡಿಸಿದ್ದಾರೆ.

ಸಾರಿಗೆ ನೌಕರರ ಪ್ರತಿಭಟನೆ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ನಿನ್ನೆ 26 ತಿಂಗಳ ಹಿಂಬಾಕಿ ಬಿಡುಗಡೆಗೆ ಹಾಗೂ 2025 ಏಪ್ರಿಲ್ ನಿಂದ ಅನ್ವಯವಾಗುವಂತೆ ವೇತನ ಪರಿಷ್ಕರಿಸಲು ಒಪ್ಪಿ ಈ ಬಗ್ಗೆ ಆದೇಶವನ್ನು ಹೊರಡಿಸಿತ್ತು. ಆದರೆ ಸಾರಿಗೆ ಸಂಸ್ಥೆಯ ನೌಕರರು ರಾಜ್ಯ ಸರ್ಕಾರದ ಈ ತೀರ್ಮಾನವನ್ನು ತಿರಸ್ಕರಿಸಿ 38 ತಿಂಗಳ ಹಿಂಬಾಕಿ ಬಿಡುಗಡೆ ಮತ್ತು 2024ರ ಜನವರಿಯಿಂದಲೇ ವೇತನ ಪರಿಷ್ಕರಣೆ ಆಗಬೇಕು. ಈ ವಿಚಾರದಲ್ಲಿ ಯಾವುದೇ ಕಾರಣಕ್ಕೂ ರಾಜಿ ಪ್ರಶ್ನೆಯಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಹಾಗಾಗಿ ನಾಳೆಯಿಂದ ಸಾರಿಗೆ ನೌಕರರು ಸಂಪು ಹೂಡುವ ಸಾಧ್ಯತೆಯಿದ್ದು, ಒಂದು ವೇಳೆ ನಾಳೆಯಿಂದಲೇ



ಮುಷ್ಕರಕ್ಕೆ ನಿರ್ಧರಿಸಿದರೆ ಬಿಎಂಟಿಸಿ ಸೇರಿದಂತೆ ರಾಜ್ಯದ ಎಲ್ಲೆಡೆ ಬಸ್ ಸಂಚಾರದಲ್ಲಿ ವ್ಯತ್ಯಯವಾಗುವ ಸಾಧ್ಯತೆಯಿದೆ.

ಸಾರಿಗೆ ನೌಕರರ ಸಂಘಟನೆಗಳು ಈ ಹಿಂದೆ ಜನವರಿ 29 ರಂದು ನಡೆಸಲು ಉದ್ದೇಶಿಸಿದ್ದ ಬೆಂಗಳೂರು ಚಲೋ ಹೋರಾಟವನ್ನು ಸಾರಿಗೆ ನೌಕರರ ಮುಖಂಡ ಅನಂತ ಸುಬ್ಬರಾವ್ ನಿಧನದ ಹಿನ್ನೆಲೆಯಲ್ಲಿ ಮುಂದೂಡಲಾಗಿತ್ತು.

ಕೆಎಸ್‌ಆರ್‌ಟಿಸಿ ಸೇರಿದಂತೆ ನಾಲ್ಕೂ ಸಾರಿಗೆ ನಿಗಮಗಳ ಹಲವಾರು ನೌಕರರು ಕೆಲಸಕ್ಕೆ ಗೈರಾಗಿ ಬೆಂಗಳೂರು ಚಲೋದಲ್ಲಿ ಭಾಗಿಯಾಗಿದ್ದರು.ರಾಜ್ಯದೆಲ್ಲೆಡೆ ಬಸ್ ಸೇವೆಯಲ್ಲಿ ವ್ಯತ್ಯಯವಾಗಬಹುದು. ಈ ಹಿನ್ನೆಲೆಯಲ್ಲಿ ಸಾರಿಗೆ ನೌಕರರು ಬೆಂಗಳೂರು ಚಲೋ ಹೋರಾಟದಲ್ಲಿ ಭಾಗಿಯಾಗದಂತೆ ಹಾಗೂ ಕಡ್ಡಾಯವಾಗಿ ಕರ್ತವ್ಯಕ್ಕೆ ಹಾಜರಾಗುವಂತೆ ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಅಕ್ರಂ ಪಾಷಾ ಆದೇಶ ಹೊರಡಿಸಿದ್ದಾರೆ.

ಎಂದಿನಂತೆ ಬಸ್ ಸಂಚಾರ:ನಾಲ್ಕು ಸಾರಿಗೆ ನಿಗಮಗಳಿಂದ ಬೆಂಗಳೂರು ಚಲೋಗೆ ಕರೆ ಹಿನ್ನೆಲೆ ರಾಜ್ಯಾದ್ಯಂತ ಸಾರಿಗೆ ಬಸ್ ಸೇವೆಯಲ್ಲಿ ವ್ಯತ್ಯಯ ಸಾಧ್ಯತೆ ಇದೆ ಎನ್ನಲಾಗಿತ್ತು.

ಆದರೆ ಬೆಳಿಗ್ಗೆಯಿಂದ ಇಲ್ಲಿಯುವರೆಗೂ ಎಲ್ಲಿಯೂ ಅನಾನುಕೂಲಗಳು ಆಗಿರುವ ಬಗ್ಗೆ ವರದಿಯಾಗಿಲ್ಲ. ಬಸ್ ಸಂಚಾರದಲ್ಲಿ ವ್ಯತ್ಯಯ ಆಗದಂತೆ ಕ್ರಮಕೈಗೊಳ್ಳಲು ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಅಕ್ರಂ ಪಾಷಾ ಆದೇಶ ಮಾಡಿದ್ದು, ತುರ್ತು ಮತ್ತು ಅನಿವಾರ್ಯ ಸಂದರ್ಭ ಹೊರತು ಯಾವುದೇ ರಜೆ ನೀಡಬೇಡಿ ಎಂದು ಸೂಚಿಸಿದ್ದಾರೆ.

ಮುಷ್ಕರ ಸಂಜೆ ನಿರ್ಧಾರ

ತಮ್ಮ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬೆಂಗಳೂರು ಚಲೋ ನಡೆಸಿರುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನೌಕರರು ರಾಜ್ಯ ಸರ್ಕಾರ 26 ತಿಂಗಳ ಹಿಂಬಾಕಿ ಬಿಡುಗಡೆಗೆ ಕೊಟ್ಟಿರುವ ಹಿನ್ನೆಲೆಯಲ್ಲಿ ನಾಳೆಯಿಂದ ಮುಷ್ಕರ ನಡೆಸಬೇಕೆ ಇಲ್ಲವೇ ಮುಷ್ಕರವನ್ನು ಕೈಬಿಡಬೇಕೆ ಎಂಬ ಬಗ್ಗೆ ಸಂಜೆ 4 ಗಂಟೆಗೆ ನಿರ್ಧಾರ ಪ್ರಕಟಿಸುವರು.

ರಾಜ್ಯ ಸರ್ಕಾರ 38 ತಿಂಗಳ ಹಿಂಬಾಕಿ ಪೈಕಿ, 26 ತಿಂಗಳ ಹಿಂಬಾಕಿ ಬಿಡುಗಡೆ ಸಮ್ಮತಿಸಿ, 2025ರ ಏಪ್ರಿಲ್ ನಿಂದ ವೇತನ ಪರಿಷ್ಕರಣೆ ಮಾಡುವುದಾಗಿ ಹೇಳಿತ್ತು.

ಆದರೆ ಕೆಎಸ್‌ಆರ್‌ಟಿಸಿ ನೌಕರರು 38 ತಿಂಗಳ ಹಿಂಬಾಕಿ ನೀಡಬೇಕು. ಹಾಗೂ 2024ರ ಜನವರಿಯಿಂದಲೇ ವೇತನ ಪರಿಷ್ಕರಣೆ ಆಗಬೇಕೆಂದು ಒತ್ತಾಯಿಸಿದ್ದಾರೆ.

ರಾಜ್ಯ ಸರ್ಕಾರದ ನಿರ್ಧಾರದ ಬಗ್ಗೆ ಇಂದು ಸಾರಿಗೆ ನೌಕರರ ಜಂಟಿ ಕ್ರಿಯಾಸಮಿತಿ ಸಭೆಯಲ್ಲಿ ಚರ್ಚಿಸಿ, ಮುಷ್ಕರದ ಬಗ್ಗೆ ತೀರ್ಮಾನ ಪ್ರಕಟಿಸುತ್ತೇವೆ ಎಂದು ಸಾರಿಗೆ ನೌಕರರ ಸಂಘದ ಅಧ್ಯಕ್ಷ ವಿಜಯಭಾಸ್ಕರ್ ತಿಳಿಸಿದರು.

# ಕೃತಕ ಬುದ್ಧಿಮತ್ತೆಯಲ್ಲಿ ಭಾರತದ ಕ್ರಾಂತಿ ಹಿರಿದು: ಮೋದಿ ಬಣ್ಣನೆ

**ನವದೆಹಲಿ,ಫೆ.19–**ಕೃತಕ ಬುದ್ಧಿಮತ್ತೆಯಲ್ಲಿ ಕ್ರಾಂತಿ ರೂಪಿಸುವಲ್ಲಿ ಭಾರತದ ಪಾತ್ರ ಹಿರಿದು ಎಂದಿರುವ ಪ್ರಧಾನಿ ನರೇಂದ್ರ ಮೋದಿ ಅವರು"ಎಲ್ಲರಿಗೂ ಸಂತೋಷ, ಎಲ್ಲರಿಗೂ ಕಲ್ಯಾಣ" ಎಂಬ ತತ್ವದ ಮೇಲೆ ದೇಶ ಮಾನದಂಡ ರೂಪಿಸಲಾಗುತ್ತಿದೆ, ಜೊತೆಗೆ ಮಾನವ ಎಐ ದೃಷ್ಟಿಕೋನಕ್ಕೆ ಹೆಚ್ಚು ಒತ್ತು ನೀಡಿದೆ ಎಂದು ತಿಳಿಸಿದ್ದಾರೆ.

ದತ್ತಾಂಶ ಹಕ್ಕುಗಳನ್ನು ರಕ್ಷಿಸುವಾಗ ಎಐನ ಒಳಗೊಳ್ಳುವಿಕೆ ಮತ್ತು ಬೆಂಬಲಿಸುವ ವಿಷಯದಲ್ಲಿ ಕೃತಕ ಬುದ್ಧಿಮತ್ತೆಯಲ್ಲಿ ಮಾನವ ಪ್ರಮುಖ ಪಾತ್ರವಹಿಸಲಿದೆ, ಎಂ ಎಂದರೆ ನೈತಿಕ ಮತ್ತು ನೈತಿಕ ವ್ಯವಸ್ಥೆಗಳು. ಎ ಎಂದರೆ ಜವಾಬ್ದಾರಿಯುತ ಆಡಳಿತ. ಎನ್ ಎಂದರೆ ರಾಷ್ಟ್ರೀಯ ಸಾರ್ವಭೌಮತ್ವ. ಎ ಎಂದರೆ ಪ್ರವೇಶಿಸಬಹುದಾದ ಮತ್ತು ಸಮಗ್ರತೆಯನ್ನು ಸೂಚಿಸುತ್ತದೆ. ವಿ ಎಂದರೆ ಮಾನ್ಯ ಮತ್ತು ಕಾನೂನುಬದ್ಧವಾಗಿದೆ" ಎನ್ನುವುದಾಗಿದೆ ಎಂದು ಹೇಳಿದ್ದಾರೆ.

ದೆಹಲಿಯಲ್ಲಿ ನಡೆಯುತ್ತಿರಯವ ಎಐ ಇಂಪಾಕ್ಟ್ ಶೃಂಗಸಭೆಯಲ್ಲಿ ಮಾತನಾಡಿದ ಅವರು ಡೀಪ್‌ಫೇಕ್ ಸೇರಿದಂತೆ ಮತ್ತಿತರ ವಿಷಯಗಳು ಮುಕ್ತ ಸಮಾಜವನ್ನು ಅಸ್ಥಿರಗೊಳಿಸುತ್ತಿವೆ. ಈ ಹಿನ್ನೆಲೆಯಲ್ಲಿ ಜಾಗತಿಕ ಸಾಮಾನ್ಯ ಒಳಿತಿಗಾಗಿ ಕೃತಕಬುದ್ದಿಮತ್ತೆ ಅಭಿವೃದ್ಧಿಪಡಿಸಲು ಪ್ರತಿಜ್ಞೆ ಮಾಡೋಣ. ಜಾಗತಿಕ ಮಾನದಂಡಗಳನ್ನು ಸ್ಥಾಪಿಸುವುದು ಇಂದಿನ ನಿರ್ಣಾಯಕ ಅಗತ್ಯವಾಗಿದೆ ಎಂದು ಹೇಳಿದ್ದಾರೆ.

ಜಾಗತಿಕ ದಕ್ಷಿಣದಲ್ಲಿ ಕೃತಕ ಬುದ್ಧಿಮತ್ತೆಗೆ ಮುಕ್ತ ಆಕಾಶ ನೀಡಬೇಕು.,ಜಿಪಿಎಸ್ ನಂತೆ ಆಜ್ಞೆ ನಮ್ಮ ಕೈಯಲ್ಲಿ ಇಟ್ಟುಕೊಳ್ಳಬೇಕು. ಜಿಪಿಎಸ್ ನಮಗೆ ದಾರಿ ತೋರಿಸುತ್ತದೆ, ಆದರೆ ಯಾವ ದಿಕ್ಕಿನಲ್ಲಿ ಹೋಗಬೇಕು ಎಂಬುದರ ಕುರಿತು ನಾವು ಅಂತಿಮ ನಿರ್ಧಾರ ತೆಗೆದುಕೊಳ್ಳಬೇಕು ಅದೇ ರೀತಿ ಕೃತಕ ಬುದ್ಧಿಮತ್ತೆ ಯಾವ ದಿಕ್ಕಿನಲ್ಲಿ ತೆಗೆದುಕೊಳ್ಳುತ್ತೇವೆಯೋ ಭವಿಷ್ಯವನ್ನು ನಿರ್ಧರಿಸುತ್ತದೆ ಎಂದು ತಿಳಿಸಿದ್ದಾರೆ

ಡಿಜಿಟಲ್ ಜಗತ್ತಿನಲ್ಲಿ, ಯಾವುದೇ ವಿಷಯ ದೃಢೀಕರಣದ ಲೇಬಲ್‌ಗಳನ್ನು ಹೊಂದಿರಬೇಕು ಕೃತಕಬುದ್ದಿಮತ್ತೆಯೊಂದಿಗೆ ನೈಜ ತಿಳಿಯುವುದು ಅಗತ್ಯವಾಗಿದೆ,ಎಐ ಹೆಚ್ಚು ಪಠ್ಯ, ಚಿತ್ರಗಳು ಮತ್ತು ವೀಡಿಯೊಗಳನ್ನು ರಚಿಸುತ್ತಿದ್ದಂತೆ, ಉದ್ಯಮಕ್ಕೆ ವಾಟರ್ಮಾರ್ಕಿಂಗ್ ಮತ್ತು ಸ್ಪಷ್ಟ ಮೂಲ ಮಾನದಂಡಗಳ ಅಗತ್ಯವಿದ ಎಂದಿದ್ದಾರೆ.




ಎಐಗೆ ಮಾನವರು ಕೇವಲ ಡೇಟಾ ಬಿಂದುಗಳು. ಮಾನವರು ಕೇವಲ ಕಚ್ಚಾ ವಸ್ತುವಾಗಿ ಕಡಿಮೆಯಾಗದಂತೆ ನೋಡಿಕೊಳ್ಳಲು, ಎಐಅನ್ನು ಸಬಲೀಕರಣಗೊಳಿಸಬೇಕಾಗಿದೆ, ಎಐ ಪರಿವರ್ತನಾ ಶಕ್ತಿ. ದಿಕ್ಕಿಲ್ಲದಿದ್ದರೆ, ಅದು ಅಡ್ಡಿಯಾಗುತ್ತದೆ; ಸರಿಯಾದ ದಿಕ್ಕನ್ನು ಕಂಡುಕೊಂಡರೆ, ಪರಿಹಾರವಾಗುತ್ತದೆ ಎಂದು ತಿಳಿಸಿದ್ದಾರೆ

ಕೃತಕಬುದ್ಧಿಮತ್ತೆ ಯಂತ್ರಗಳನ್ನು ಬುದ್ಧಿವಂತರನ್ನಾಗಿ ಮಾಡುತ್ತಿದೆ, ಆದರೆ ಅದಕ್ಕಿಂತ ಹೆಚ್ಚಾಗಿ, ಮಾನವ ಸಾಮರ್ಥ್ಯಗಳನ್ನು ಹಲವು ಪಟ್ಟು ಹೆಚ್ಚಿಸುತ್ತಿದೆ.ಈ ಬಾರಿ ವೇಗ ಅಭೂತಪೂರ್ವವಾಗಿದೆ ಮತ್ತು ಪ್ರಮಾಣ ಅನಿರೀಕ್ಷಿತವಾಗಿದೆ. ಹಿಂದೆ, ತಂತ್ರಜ್ಞಾನದ ಪ್ರಭಾವ ಗೋಚರಿಸಲು ದಶಕಗಳೇ ಬೇಕಾಯಿತು. ಇಂದು, ಯಂತ್ರ ಕಲಿಕೆಯಿಂದ ಕಲಿಕಾ ಯಂತ್ರಗಳವರೆಗಿನ ಪ್ರಯಾಣ ಎಂದಿಗಿಂತಲೂ ವೇಗವಾಗಿ ಮತ್ತು ವಿಶಾಲವಾಗಿದೆ ಎಂದು ತಿಳಿಸಿದ್ದಾರೆ.

"ಸಂಕೇತಗಳನ್ನು ಮೊದಲು ವೈರ್‌ಲೆಸ್ ಮೂಲಕ ರವಾನಿಸಿದಾಗ, ಇಡೀ ಜಗತ್ತು ಒಂದು ದಿನ ನೈಜ ಸಮಯದಲ್ಲಿ ಸಂಪರ್ಕಗೊಳ್ಳುತ್ತದೆ ಎಂದು ಯಾರೂ ಊಹಿಸಿರಲಿಲ್ಲ. ಕೃತಕ ಬುದ್ಧಿಮತ್ತೆ ಮಾನವ ಇತಿಹಾಸದ ಒಂದು ರೂಪಾಂತರವಾಗಿದೆ. ಈಗ ನಾವು ನೋಡುತ್ತಿರುವುದು, ಊಹಿಸುತ್ತಿರುವುದು, ಅದರ ಪ್ರಭಾವದ ಆರಂಭ ಮಾತ್ರ ಎಂದು ತಿಳಿಸಿದ್ಧಾರೆ

ವಿಶ್ವದ ಅತ್ಯಂತ ಐತಿಹಾಸಿಕ ಎಐ ಶೃಂಗಸಭೆಗೆ ಜಾಗತಿಕ ನಾಯಕರನ್ನು ಮತ್ತೊಮ್ಮೆ ಸ್ವಾಗತಿಸುತ್ತೇನೆ. ಭಾರತ ವಿಶ್ವದ ಅತಿದೊಡ್ಡ ತಂತ್ರಜ್ಞಾನ ಸಮೂಹದ ಕೇಂದ್ರವಾಗಿದೆ  ಭಾರತದಲ್ಲಿ ಎಐ ಶೃಂಗಸಭೆಯನ್ನು ಆಯೋಜಿಸಲಾಗುತ್ತಿರುವುದು ಜಾಗತಿಕ ದಕ್ಷಿಣಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದಿದ್ದಾರೆ

ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಮಾತನಾಡಿ ಎಐ ಶೃಂಗಸಭೆ ಉದ್ದೇಶವು, ಹೆಚ್ಚಿನದನ್ನು ಮಾಡೋಣ ಎಂದು ಹೇಳುವುದಲ್ಲ, ಬದಲಾಗಿ ಒಟ್ಟಿಗೆ ಉತ್ತಮವಾಗಿ ಮಾಡೋಣ ಎನ್ನುವುದಾಗಿದೆ ಎಐ ಕೃತಕ ಬುದ್ದಿಮತ್ತೆ ಪ್ರಬಲ ವೇಗವರ್ಧಕ ಮತ್ತು ಕಾರ್ಮಿಕ ಮಾರುಕಟ್ಟೆಗಳಿಗೆ ಪ್ರಮುಖ ಬದಲಾವಣೆಗೆ ಕಾರಣವಾಗಿದೆ ಎಂದಿದ್ಧಾರೆ.

ಎಐ ವಿಷಯದಲ್ಲಿ ಫ್ರಾನ್ಸ್ ಮತ್ತು ಭಾರತ ಸಾಮಾನ್ಯ ದೃಷ್ಟಿಕೋನ ಹಂಚಿಕೊಳ್ಳುತ್ತವೆ. ನಮ್ಮ ಗ್ರಹವನ್ನು ರಕ್ಷಿಸಲು ಮತ್ತು ಎಲ್ಲರಿಗೂ ಸಮೃದ್ಧಿ ಬೆಳೆಸಲು ಕೃತಕಬುದ್ದಿಮತ್ತೆ ಸಹಕಾರಿಯಾಗಲಿದೆ.ಕಳೆದ ವರ್ಷ ಪ್ಯಾರಿಸ್‌ನಲ್ಲಿ, ಕ್ರಿಯೆ ಎಂದು ಕರೆದಿದ್ದೇವೆ. ಈ ವರ್ಷ ದೆಹಲಿಯಲ್ಲಿ ಅದನ್ನು ಪರಿಣಾಮ ಎಂದು ಕರೆಯುತ್ತೇವೆ.

ಆದರೆ ನಿಜವಾದ ಹಲವು ಹೆಸರು ಸರಳವಾಗಿದೆಎಐ ಮತ್ತು ಡಿಜಿಟಲೀಕರಣ ಮುಂಬರುವ ತಿಂಗಳುಗಳಿಗೆ ಪ್ರಮುಖ ವಿಷಯವಾಗಿದೆ ಎಂದು ತಿಳಿಸಿದ್ಧಾರೆ

ಇದೇ ವೇಳೆ ಗೂಗಲ್ ಮತ್ತು ಆಲ್ಫಾಬೆಟ್‌ನ ಸಿಇಒ ಸುಂದರ್ ಪಿಚ್ಚೈ, ಓಪನ್‌ಎಐನ ಸಿಇಒ ಸ್ಯಾಮ್ ಆಲ್ಟ್‌ಮನ್, ಮೆಟಾದ ಮುಖ್ಯ ಎಐ ಅಧಿಕಾರಿ ಅಲೆಕ್ಸಾಂಡರ್ ವಾಂಗ್, ಆಂಥ್ರೊಪಿಕ್‌ನ ಸಿಇಒ ಡೇರಿಯೊ ಅಮೋಡೆ ಸೇರಿದಂತೆ ಜಾಗತಿಕ ತಂತ್ರಜ್ಞಾನ ನಾಯಕರು ಭಾಗಿಯಾಗಿದ್ದರು

ಉದ್ಯೋಗ ಸೃಷ್ಟಿಗೆ ಆದ್ಯತೆ–"ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಬದ್ಧತೆ ಘೋಷಿಸಲು ಸಂತೋಷವಾಗಿದೆ" ಎಂದು ಹೇಳಿರುವ ಕೇಂದ್ರ ಸಚಿವೆ ಅಶ್ವಿನಿ ವೈಷ್ಣವ್ ಉದ್ಯೋಗಗಳು, ಕೌಶಲ್ಯಗಳು ಮತ್ತು ಆರ್ಥಿಕ ರೂಪಾಂತರಕ್ಕೆ ಸಾಕ್ಷಿಯಾಗಿದೆ ಎಂದಿದ್ದಾರೆ.

ಪುರಾವೆ ಆಧಾರಿತ ನೀತಿ ನಿರೂಪಣೆ ಬೆಂಬಲಿಸಲು ಅನಾಮಧೇಯ ಮತ್ತು ಒಟ್ಟುಗೂಡಿಸಿದ ಒಳನೋಟಗಳ ಮೂಲಕ ನೈಜ–ಪ್ರಪಂಚದ ಎಐಬಳಕೆಯ ತಿಳುವಳಿಕೆ ಮೂಡಿಸುತ್ತದೆ ಎರಡನೆಯದು ಭಾಷೆಗಳು, ಸಂಸ್ಕೃತಿಗಳು ಮತ್ತು ನೈಜ–ಪ್ರಪಂಚದ ಬಳಕೆಯ ಸಂದರ್ಭಗಳಲ್ಲಿ, ವಿಶೇಷವಾಗಿ ಜಾಗತಿಕ ದಕ್ಷಿಣದಲ್ಲಿ ಎಐ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ತಿಳಿಸಿದ್ದಾರೆ

ಅಂತರ್ಗತ, ಅಭಿವೃದ್ಧಿ–ಆಧಾರಿತ ಮತ್ತು ಜಾಗತಿಕವಾಗಿ ಪ್ರಸ್ತುತವಾಗಿರುವ ಎಐ ಅನ್ನು ರೂಪಿಸುವತ್ತ ಒಂದು ಪ್ರಮುಖ ಹೆಜ್ಜೆಯನ್ನು ಗುರುತಿಸುತ್ತವೆ. ಉಪಕ್ರಮ ಎಐ ಆಡಳಿತದ ಕುರಿತು ಜಾಗತಿಕ ದಕ್ಷಿಣ ನೇತೃತ್ವದ ದೃಷ್ಟಿಕೋನವನ್ನು ನಿರ್ಮಿಸುವಲ್ಲಿ ಭಾರತವನ್ನು ಮುಂಚೂಣಿಯಲ್ಲಿ ಇರಿಸುತ್ತದೆ ಎಂದು ಹೇಳಿದರು.

# ಎಐನಲ್ಲಿ ರಾಜ್ಯದ ಪ್ರಗತಿ ಜಾಗತಿಕ ದಿಗ್ಗಜರಿಗೆ ಪ್ರಿಯಾಂಕ್ ಮನವರಿಕೆ

**ನವದೆಹಲಿ, ಫೆ. 19–** ಕೃತಕ ಜಾಣ್ಮೆ ಮತ್ತು ಡೀಪ್ ಟೆಕ್ನಾಲಜಿ ಕ್ಷೇತ್ರಗಳಲ್ಲಿ ಕರ್ನಾಟಕವು ಪ್ರಭಾವಶಾಲಿಯಾಗಿ ಬೆಳೆಯುತ್ತಿರುವುದನ್ನು ಇಲ್ಲಿ ನಡೆಯುತ್ತಿರುವ ಭಾರತ ಕೃತಕ ಬುದ್ಧಿಮತ್ತೆ ಪ್ರಭಾವ ಶೃಂಗಸಭೆಯಲ್ಲಿ ಎಲೆಕ್ಟ್ರಾನಿಕ್ಸ್, ಐಟಿ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಜಾಗತಿಕ ದಿಗ್ಗಜರಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.ಜಾಗತಿಕ ಉದ್ಯಮ ದಿಗ್ಗಜರು, ಸಂಶೋಧಕರು ಮತ್ತು ನವೋದ್ಯಮ ಸ್ಥಾಪಕರ ಜೊತೆಗೆ ಸಚಿವರು ವ್ಯಾಪಕ ಸಮಾಲೋಚನೆ ನಡೆಸಿದರು.

ಶೃಂಗಸಭೆಯ ಸಂದರ್ಭದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಸಚಿವರು, "ಕೃತಕ ಜಾಣ್ಮೆ ಕ್ಷೇತ್ರದಲ್ಲಿ ಪ್ರಗತಿಯ ದಾಪುಗಾಲು ಹಾಕುತ್ತಿರುವ ಕರ್ನಾಟಕವು ಮುಂಚೂಣಿ ಸ್ಥಾನ ಕಾಯ್ದುಕೊಂಡಿದೆ. ಹಾರ್ವೆ ಎಐ ಮತ್ತು ಆಂಥ್ರೊಪಿಕ್‌ನಂತಹ ಈ ವಲಯದ ಜಾಗತಿಕ ದೈತ್ಯ ಕಂಪನಿಗಳು ರಾಜ್ಯದಲ್ಲಿ ಈಗಾಗಲೆ ನೆಲೆವೂರಿವೆ.

ವಾಲ್ಟ್ ಡಿಸ್ನಿ ಕಂಪನಿಯು ಬೆಂಗಳೂರಿನಲ್ಲಿ ತನ್ನ ಎಐ ಜಾಲ ವಿಸ್ತರಿಸುತ್ತಿದೆ. ಎಐ ಪ್ರತಿಭೆಗಳಿಗೆ ಬೆಂಗಳೂರು ಜಾಗತಿಕವಾಗಿ ಅಗ್ರ ಸ್ಥಾನದಲ್ಲಿದೆ. ರಾಜ್ಯ ಸರ್ಕಾರವು 1 ಕೋಟಿವರೆಗಿನ ಅನುದಾನದ ಮೂಲಕ ನವೋದ್ಯಮಗಳನ್ನು ಪ್ರೋತ್ಸಾಹಿಸುತ್ತಿದೆ. ಎಐ ನ ಹೊಣೆಗಾರಿಕೆಯುತ ಬಳಕೆ ಖಚಿತಪಡಿಸಿಕೊಳ್ಳಲು,



ಕರ್ನಾಟಕವು ಈ ಕ್ಷೇತ್ರದ ಜಾಗತಿಕ ಮುಖಂಡರು ಮತ್ತು ಸಂಶೋಧಕರ ಜೊತೆಗೆ ನಿಕಟ ಸಂಪರ್ಕದಲ್ಲಿ ಇದೆ ಎಂದು ಹೇಳಿದರು. ಆಸ್ಪತ್ರೆ ಕಾರ್ಯನಿರ್ವಹಣೆಗೆ ಸುಧಾರಿತ ಎಂಟರ್‌ಪ್ರೈಸ್ ಎಐ ಅನ್ನು ಪ್ರಾಯೋಗಿಕವಾಗಿ ಬಳಸಿಕೊಳ್ಳಲು ಎಚ್

ಕಂಪನಿ ಮತ್ತು ಬೆಂಗಳೂರಿನ ಸೇಂಟ್ ಜಾನ್ಸ್ ವೈದ್ಯಕೀಯ ಕಾಲೇಜ್ ಮತ್ತು ಸೇಂಟ್ ಜಾನ್ಸ್ ಸಂಶೋಧನಾ ಸಂಸ್ಥೆ ನಡುವಣ ಒಪ್ಪಂದಕ್ಕೆ ಸಹಿ ಹಾಕುವುದಕ್ಕೆ ಸಚಿವರು ಸಾಕ್ಷಿಯಾದರು.

ಕರ್ನಾಟಕ ಮತ್ತು ಜಾಗತಿಕ ಉದ್ಯಮಗಳ ನಡುವೆ ತಂತ್ರಜ್ಞಾನ ಸಹಯೋಗ, ಹೂಡಿಕೆ ಪಾಲುದಾರಿಕೆ ಮತ್ತು ನಾವೀನ್ಯತೆ ಆಧಾರಿತ ಬೆಳವಣಿಗೆ ಬಲಪಡಿಸುವ ಕುರಿತ ಚರ್ಚೆಗಳಿಗೆ ವೇದಿಕೆ ಕಲ್ಪಿಸಿದ್ದ ಅಮೆರಿಕ □ ಭಾರತ ವಾಣಿಜ್ಯ ಮಂಡಳಿಯು (ಯುಎಸ್‌ಐಬಿಸಿ) ಆಯೋಜಿಸಿದ್ದ ದುಂಡುಮೇಜಿನ ಸಭೆಯಲ್ಲಿ ಖರ್ಗೆ ಭಾಗವಹಿಸಿದ್ದರು.

ಬೆಂಗಳೂರಿನಲ್ಲಿ ಅಮೆರಿಕದ ಕಂಪನಿಗಳು ತಮ್ಮ ವಹಿವಾಟು ವಿಸ್ತರಿಸಲು ಮತ್ತು ನಾವೀನ್ಯತೆ ಸಾಧಿಸಲು ಹೆಚ್ಚು ಅನುಕೂಲಕರ ವಾತಾವರಣ ಒದಗಿಸಲು ರಾಜ್ಯ ಸರ್ಕಾರದ ಬದ್ಧತೆಯನ್ನು ಈ ಸಭೆಯಲ್ಲಿ ಪುನರುಚ್ಚರಿಸಲಾಯಿತು ಎಂದು ಖರ್ಗೆ ಹೇಳಿದರು.

ಫಿನ್ಲೆಂಡ್ ಹಾಗೂ ಸೈಪ್ರಸ್‌ನ ಉನ್ನತ ನಿಯೋಗವನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ಕರ್ನಾಟಕ ಪೆವಿಲಿಯನ್ ಮತ್ತು ಆರ್ಟ್‌ಪಾರ್ಕ್ ಪೆವಿಲಿಯನ್‌ಗಳಿಗೂ ಭೇಟಿ ನೀಡಿದ್ದರು. ವಿವಿಧ ನವೋದ್ಯಮಗಳ ಮುಖ್ಯಸ್ಥರ ಜೊತೆಗೆ ಸಮಾಲೋಚನೆ ನಡೆಸಿದರು.

# ಮಾನ್ವಿ ಎನ್ಪಿಎಸ್ ನೌಕರರ ಸಂಘದ ಪದಾಧಿಕಾರಿಗಳ ಆಯ್ಕೆ: 'ತಾಲೂಕ ಅಧ್ಯಕ್ಷರಾಗಿ ಸುರೇಶ ಕುಮಾರ ಪುನರ್ ಅಯ್ಕೆ'



ಯುವಮಾರ್ಗ ಸುದ್ದಿ

**ಮಾನ್ವಿ,ಫೆ.19–** ಕರ್ನಾಟಕ ರಾಜ್ಯ ಸರ್ಕಾರಿ ಎನ್ಪಿಎಸ್ ನೌಕರರ ಸಂಘ ತಾಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ ನಡೆಯಿತು.ತಾಲೂಕ ಅಧ್ಯಕ್ಷರಾಗಿ ಸುರೇಶ ಕುಮಾರ ಎರಡನೇ ಅವಧಿಗೆ ಮರು ಆಯ್ಕೆಯಾದರು.

ಪಟ್ಟಣದಲ್ಲಿ ಇತ್ತೀಚ್ಚಿಗೆ ನಡೆದ ತಾಲೂಕು ಸರ್ಕಾರಿ ಎಸ್ಪಿಎಸ್ ನೌಕರರ ನೂತನ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ

ರಾಜ್ಯ ಸಂಘಟನೆಯ ಆದೇಶದ ಮೇರೆಗೆ ವಿವಿಧ ಸ್ಥಾನಗಳಿಗೆ ಜಿಲ್ಲಾ ಸಂಘದ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ನೇತೃತ್ವದಲ್ಲಿ ಮಾನ್ವಿ ತಾಲೂಕಿನ ಎಲ್ಲಾ ಇಲಾಖೆಗಳ ಎನ್ಪಿಎಸ್ ನೌಕರರ ಸಮ್ಮುಖದಲ್ಲಿ ತಾಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ತಾಲೂಕ ಅಧ್ಯಕ್ಷರಾಗಿ ಸುರೇಶ ಕುಮಾರ ಸಹ ಶಿಕ್ಷಕರು ಬಾಲಕರ ಸರ್ಕಾರಿ ಪ್ರೌಢಶಾಲೆ ಮಾನ್ವಿ ಅವರು ಎರಡನೇ ಅವಧಿಗೆ ಮರು ಆಯ್ಕೆಯಾದರು. ಗೌರವಾಧ್ಯಕ್ಷರಾಗಿ ಯಂಕಯ್ಯ ಶೆಟ್ಟಿ ಆರೋಗ್ಯ ಇಲಾಖೆ, ಪ್ರಧಾನ ಕಾರ್ಯದರ್ಶಿಯಾಗಿ ಹರ್ಷವರ್ಧನ ಅನುದಾನಿತ ಶಾಲಾ ವಿಭಾಗ, ಖಜಾಂಚಿಗಳು ತಿಮ್ಮೇಶ್ ನಾಯಕ ಆರೋಗ್ಯ ಇಲಾಖೆ, ಉಪಾಧ್ಯಕ್ಷರಾಗಿ ಸೈ.ಮುಜೀಬ್

ಕಾಲೇಜು ಶಿಕ್ಷಣ ಇಲಾಖೆ ರೇಣವ್ವ ಕಟ್ನಳ್ಳಿ

ಪ್ರಾಥಮಿಕ ಶಿಕ್ಷಣ ಇಲಾಖೆ, ನೀಲಕಂಠ ಜಿಪಿಟಿ ಶಾಲಾ ಶಿಕ್ಷಕರ ವಿಭಾಗ, ವೀರೇಶ ಯಾದವ ಕೃಷಿ ಇಲಾಖೆ,ಜಂಟಿ ಕಾರ್ಯದರ್ಶಿಯಾಗಿ ಜಗದೀಶ್ ಸಹಕಾರಿ ಇಲಾಖೆ, ಸಂಘಟನಾ ಕಾರ್ಯದರ್ಶಿ ಸುಗುರೇಶ್ ಪಾಟೀಲ್

ಜಿಪಿಟಿ ಶಿಕ್ಷಣ ಇಲಾಖೆ ಹಾಗೂ ಬಾಳಪ್ಪ ಆರೋಗ್ಯ ಇಲಾಖೆ ಹಾಗೂ ಶಿವಗೇನಿ ನಾಯಕ ಜೆಸ್ಕಾಂ, ಹಾಗೂ ವೆಂಕಟೇಶ್ ಯಾದವ್ ನೀರಾವರಿ ಇಲಾಖೆ, ಸಹ ಕಾರ್ಯದರ್ಶಿಯಾಗಿ ವಿಜಯಕುಮಾರ್ ಕುರುಡಿ ಪ್ರಾಥಮಿಕ ಶಿಕ್ಷಣ ಇಲಾಖೆ ಹಾಗೂ ಶರಣಬಸವ ಉಠಿಣ ಶಿಕ್ಷಣ ಇಲಾಖೆ, ಸಲಾವುದ್ದಿನ್ ಬಾಬರ್

ಆಂತರಿಕ ಲೆಕ್ಕ ಪರಿಶೋಧಕರು

ಕಂದಾಯ ಇಲಾಖೆ, ಸೈಯದ್ ಸಂದಾನಿ ಸಿದ್ದಿಕಿ ವಕೀಲರು ಕಾನೂನು ಸಲಹೆಗಾರ,

ಸಂಘಟನಾ ಗೌರವ ಸಲಹೆಗಾರರಾಗಿ ಮಲ್ಲಿಕಾರ್ಜುನ ಕೋನಾಪುರಪೇಟೆ

ಪ್ರಾಥಮಿಕ ಶಿಕ್ಷಣ ಇಲಾಖೆ, ಹಾಗೂ ಬಸನಗೌಡ ಪೊಲೀಸ್ ಪಾಟೀಲ್*

ಅನುದಾನಿತ ಶಾಲಾ ಶಿಕ್ಷಣ ಹಾಗೂ ಮಲ್ಲಿಕಾರ್ಜುನ ಗೌಡ

ಭೂಮಾಪನ ಇಲಾಖೆ ಅವರನ್ನು ಆಯ್ಕೆ ಮಾಡಲಾಯಿತು. ನಂತರ ಸಂಘದ ವತಿಯಿಂದ ನೂತನ ಪದಾಧಿಕಾರಿಗಳು ಸನ್ಮಾನಿಸಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ತಾಲೂಕ ಸರ್ಕಾರಿ ಎನ್ಪಿಎಸ್ ನೌಕರರ ಸಂಘದ ಪದಾಧಿಕಾರಿಗಳು ಸರ್ವ ಸದಸ್ಯರು ಉಪಸ್ಥಿತರಿದ್ದರು.

# ಸುಲಿಗೆ: ಆರೋಪಿಗಳಿಗೆ ಮೂರು ವರ್ಷ ಕಠಿಣ ಕಾರಾಗೃಹ ವಾಸ ಶಿಕ್ಷೆ



**ಕಲಬುರಗಿ,ಫೆ.19–**2016ರಲ್ಲಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಹುಮನಾಬಾದ ಸರ್ಕಲ್ ಸರ್ಕಲ್ ಬಳಿಯ ಟಿ.ವಿ.ಸ್ಟೇಷನ್ ಕ್ವಾಟರ್ಸ್ ಎದರುಗಡೆಯ ರಸ್ತೆಯ ಮೇಲೆ ನಡೆದುಕೊಂಡು ಹೋಗುತ್ತಿದ್ದ ವ್ಯಕ್ತಿಯೊಬ್ಬರನ್ನು ಆಟೋದಿಂದ ಅಡ್ಡಗಟ್ಟಿ ಅವರ ಬಳಿ ಇದ್ದ ಮೊಬೈಲ್ ಮತ್ತು 3,500 ರೂ.ನಗದು ದೋಚಿದ್ದ ಮೂವರು ಆರೋಪಿಗಳಿಗೆ 3 ವರ್ಷ ಕಠಿಣ ಕಾರಾಗೃಹವಾಸ ಶಿಕ್ಷೆ, ತಲಾ 10 ಸಾವಿರ ರೂ.ದಂಡ ವಿಧಿಸಿದೆ.

ಖಲೀಲ್ ತಂದೆ ಖಾಜಾ ಪಟೇಲ್, ಆಸೀಫ್ ತಂದೆ ಬಹಿಬೂಬ್, ಅವಿನಾಶ ತಂದೆ ಸುಭಾಷಚಂದ್ರ ಮಾಳಾ ಶಿಕ್ಷೆಗೆ ಗುರಿಯಾದ ಆರೋಪಿಗಳಾಗಿದ್ದಾರೆ.

ಇವರು 2016ರಲ್ಲಿ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಹುಮನಾಬಾದ ಸರ್ಕಲ್ ಸರ್ಕಲ್ ಬಳಿಯ ಟಿ.ವಿ.ಸ್ಟೇಷನ್ ಕ್ವಾಟರ್ಸ್ ಎದರುಗಡೆಯ ರಸ್ತೆಯ ಮೇಲೆ ನಡೆದುಕೊಂಡು ಹೋಗುತ್ತಿದ್ದ ವ್ಯಕ್ತಿಯೊಬ್ಬನ್ನನು ಅಡ್ಡಗಟ್ಟಿ ಅವರ ಬಳಿ ಇದ್ದ ಮೊಬೈಲ್ ಮತ್ತು 3,500 ರೂ.ನಗದು ದೋಚಿದ್ದರು. ಈ ಬಗ್ಗೆ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪಿಎಸ್ಐ ಉದ್ದಂಡಪ್ಪ ಮಣ್ಣೂರಕರ್ ಹಾಗೂ ಸಿಪಿಐ ವಾಜೀದ್ ಪಟೇಲ್ ಅವರು ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಪ್ರಭಾರಿ 5ನೇ ಜೆಎಂಎಸಿ ನ್ಯಾಯಾಲಯದ ನ್ಯಾಯಾಧೀಶರಾದ ಲಲೀತಾ ಕುದರಿಮತಿ ಅವರು ಆರೋಪಿಗಳಿಗೆ ಮೂರು 3 ವರ್ಷ ಕಠಿಣ ಕಾರಾಗೃಹವಾಸ ಶಿಕ್ಷೆ, ತಲಾ 10 ಸಾವಿರ ರೂ.ದಂಡ ವಿಧಿಸಿದ್ದಾರೆ. ಸರ್ಕಾರದ ಪರವಾಗಿ ಸಹಾಯಕ ಸರ್ಕಾರಿ ಅಭಿಯೋಜಕರಾದ ಸಂತೋಷಕುಮಾರ ಲೋಖಂಡೆ ವಾದ ಮಂಡಿಸಿದ್ದರು.

# ರಾಜ್ಯದಲ್ಲಿ ಒಪಿಎಸ್ ಜಾರಿಗೆ ಯತ್ನ: ಷಡಾಕ್ಷರಿ



**ಜೇವರ್ಗಿ:ಫೆ.19:** 'ಎನ್‌ಪಿಎಸ್ ರದ್ದುಪಡಿಸಿ ಒಪಿಎಸ್ ಜಾರಿ ಮಾಡುತ್ತೇವೆ. ಇದಕ್ಕಾಗಿ ಎಲ್ಲರೂ ಸೇರಿ ಹೋರಾಟ ಮಾಡೋಣ' ಎಂದು ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ನೌಕರರಲ್ಲಿ ಮನವಿ ಮಾಡಿದರು.

ಪಟ್ಟಣದ ಧರ್ಮಸಿಂಗ್ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ತಾಲ್ಲೂಕು ಘಟಕದ ವತಿಯಿಂದ ಬುಧವಾರ ಆಯೋಜಿಸಲಾಗಿದ್ದ ತಾಲ್ಲೂಕು ಮಟ್ಟದ ಉತ್ತಮ ಸೇವಾ ರತ್ನ ಪ್ರಶಸ್ತಿ ಪ್ರದಾನ, ತಾಲ್ಲೂಕು ವಾರ್ಷಿಕ ಮಹಾಸಭೆ, ಸರ್ಕಾರಿ ನೌಕರರ ಸೇವಾ ನಿಯಮಗಳ ಕಾರ್ಯಾಗಾರ ಕಾರ್ಯ–ಕ್ರಮದಲ್ಲಿ ಅವರು ಮಾತನಾಡಿದರು.

'ಸರ್ಕಾರ ಆದಷ್ಟು ಬೇಗನೆ ವರದಿಯನ್ನು ತೆಗೆದುಕೊಂಡು ಅಧ್ಯಯನ ಮಾಡಿ ಮುಂಬರುವ ಬಜೆಟ್‌ನಲ್ಲಿ ಎಸ್‌ಪಿಎಸ್ ರದ್ದುಪಡಿಸಿ ಒಪಿಎಸ್ ಜಾರಿ ಮಾಡಬೇಕು.

ಪಟ್ಟಣದ ಧರ್ಮಸಿಂಗ್ ಕಲ್ಯಾಣ ಮಂಟಪದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ನಡೆದ ಉತ್ತಮ ಸೇವಾರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ ಉದ್ಘಾಟಿಸಿದರು

ಈಗಾಗಲೇ ಕೇಂದ್ರ ಮಾದರಿಯ ವೇತನ ಪಡೆಯುತ್ತಿದ್ದಾರೆ. ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ನೌಕರರ ಸಮಸ್ಯೆಗಳಿಗೆ ಸ್ಪಂದಿಸಿ ಅವರ ಬೇಡಿಕೆಗಳನ್ನು ಈಡೇರಿಸುವ ಪ್ರಯತ್ನ ಮಾಡಲಾಗುತ್ತಿದೆ' ಎಂದರು.

'ರಾಜ್ಯದಲ್ಲಿ 6.5 ಲಕ್ಷಕ್ಕೂ ಮೇಲ್ಪಟ್ಟು ಸರ್ಕಾರಿ ನೌಕರರು ಇದ್ದು ಪ್ರಾಮಾಣಿಕತೆಯಿಂದ ಕೆಲಸ ಮಾಡಿ. ಕೆಜಿಡಿ ಆನ್‌ಲೈನ್, ಸರಿಯಾದ ಸಮಯಕ್ಕೆ ವೇತನ, ಡಿಎ ಹೆಚ್ಚಳ, ಆರೋಗ್ಯ ಯೋಜನೆ, ಮಹಿಳಾ ನೌಕರಸ್ಥರಿಗೆ ಋತುಚಕ್ರ ರಜೆ, ಕ್ಯಾನ್ಸರ್, ಕಿಡ್ನಿ ಪೀಡಿತ ನೌಕರರಿಗೆ

6 ತಿಂಗಳು ರಜೆ ಸೇರಿ ಮುಂತಾದ ಬೇಡಿಕೆಗಳನ್ನು ಈಡೇರಿಸಲಾಗು ತಿದೆ' ಎಂದು ತಿಳಿಸಿದರು. ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ ನರಿಬೋಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ನೌಕರದ ಸಂಘದ ತಾಲ್ಲೂಕು ಅಧ್ಯಕ್ಷ ದಾನಪ್ಪಗೌಡ ಹಳಿಮನಿ ಅಧ್ಯಕ್ಷತೆ ವಹಿಸಿದ್ದರು. ಸೊನ್ನ ದಾಸೋಹ ಮಠದ ಪೀಠಾಧಿಪತಿ ಶಿವಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಎಂಎಸಿ ಶಶೀಲ್ ನಮೋಶಿ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ನೌಕರರ ಸಂಘದ

ಹಲವಾರು ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳಿಗೆ ಅದರಲ್ಲೂ ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯ ಅನುಮತಿ ಬೇಕಿಲ್ಲ. ಹೀಗಾಗಿ ಹುದ್ದೆಗಳ ನೇಮಕಾತಿ ಹಾಗೂ ಒಪಿಎಸ್ ಜಾರಿಗೆ ಸದನದಲ್ಲಿ ಹೋರಾಟ ಮಾಡಲಾಗುವುದು ಶಶೀಲ್ ನಮೋಶಿ, ಎಂಎಸಿ

ಜಿಲ್ಲಾಧ್ಯಕ್ಷ ಬಸವರಾಜ ಬಳ್ಳುಂಡಗಿ, ರಾಜಶೇಖರ ಸಾಹು ಸೀರಿ, ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಗಿರಿಗೌಡರ, ತಹಶೀಲ್ದಾರ್ ಮಲ್ಲಣ್ಣ ಯಲಗೋಡ, ತಾ.ಪಂ ಇಒ ರವಿಚಂ–ದ್ರರೆಡ್ಡಿ, ಪುರಸಭೆ ಮುಖ್ಯಾಧಿಕಾರಿ ಶಂಭುಲಿಂಗ ದೇಸಾಯಿ ಡಿ ಬಿ ಪಾಟೀಲ್ ಗುಡುಲಾಲ್ ಶೇಖ ಸೇರಿದಂತೆ ಹಲವಾರು ಸರ್ಕಾರಿ ನೌಕರರು ಭಾಗವಹಿಸಿದ್ದರು. ಸಂಘದ ಅಧ್ಯಕ್ಷ ದಾನಪ್ಪಗೌಡ ಹಳಿಮನಿ ಸ್ವಾಗತಿಸಿದರು. ಶಿಕ್ಷಕ ಶಿವಾನಂದ ದಾನಮ್ಮಗುಡಿ ನಿರೂಪಿಸಿದರು. ಶಿಕ್ಷಕ ಶಂಬಣ್ಣ ಹೂಗಾರ ವಂದಿಸಿದರು.

# 130 ಕೋಟಿ ವೆಚ್ಚದ ಬ್ರಿಡ್ಜ್ ಕಂ ಬ್ಯಾರೇಜ್ಹರವಾಳ ಬಳಿ ಭೀಮಾನದಿಗೆ ಅಡ್ಡಲಾಗಿ ಎರಡನೇ ಸೇತುವೆ ನಿರ್ಮಾಣಕ್ಕೆ ಚಾಲನೆ

**ಜೇವರಗಿ,ಫೆ 19:** ತಾಲ್ಲೂಕಿನ ಹರವಾಳ ಗ್ರಾಮದ ಬಳಿ 130 ಕೋಟಿ ವೆಚ್ಚದಲ್ಲಿ ಭೀಮಾ ನದಿಗೆ ಬಾಂದಾರ ಸಹಿತ ಸೇತುವೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ.

ಬೆಂಗಳೂರಿನ ಜಿ.ಎಂ.ಮಸ್ತಾನಯ್ಯ ಕನ್ಸಕ್ಷನ್ ಕಂಪನಿ ಈ ಕಾಮಗಾರಿ ಗುತ್ತಿಗೆ ಪಡೆದಿದ್ದು, ಹರವಾಳ ಗ್ರಾಮದ ಬಳಿ ಭೀಮಾನದಿಗೆ ಅಡ್ಡಲಾಗಿ ಎರಡನೇ ಸೇತುವೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದಂತಾಗಿದೆ.

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವತಿಯಿಂದ ಭಾರತ್ ಮಾಲಾ ಯೋಜನೆಯಡಿ ಈಗಾಗಲೇ ಗ್ರಾಮದ ಇಂದಿರಾ ನಗರ ಹತ್ತಿರ ಸೇತುವೆ ಕಾಮಗಾರಿ ನಡೆದಿದ್ದು, ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ. 130 ಕೋಟಿ ವೆಚ್ಚದ ಈ ಮಹತ್ವಕಾಂಕ್ಷಿ ಬ್ರಿಡ್ಜ್ ಕಂ ಬ್ಯಾರೇಜ್ ಯೋಜನೆಯಿಂದ ಜೇವರ್ಗಿ ಮತ್ತು ಅಫಜಲಪುರ ಜನ–ಜಾನುವಾರಗಳಿಗೆ ಮತ್ತು ರೈತರಿಗೆ ನೀರಾವರಿ ಸೌಲಭ್ಯ ಪಡೆಯಲು ವರದಾನವಾಗಲಿದೆ.

ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಭೀಮಾ ನದಿಗೆ ಅಡ್ಡಲಾಗಿ ಬಾಂದಾರ ಮತ್ತು ಸೇತುವೆ ನಿರ್ಮಾಣದ ಕಾಮಗಾರಿಯು ಅತ್ಯಂತ ವೇಗವಾಗಿ ಸಾಗುತ್ತಿದೆ. ಈ ಸೇತುವೆಯಿಂದಾಗಿ ಪ್ರವಾಹ ಸಂದರ್ಭಗಳಲ್ಲಿ ಸುಗಮಹಾಗೂ ತ್ವರಿತ ಪ್ರಯಾಣಕ್ಕೆ ಅನುಕೂಲವಾಗಲಿದೆ.

ಈ ಬಾಂದಾರಿನ ಯೋಜನೆಯಿಂದ ಜೇವರ್ಗಿ ಹಾಗೂ ಆಫಜಲಪುರ ಎರಡು ತಾಲ್ಲೂಕಿನ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವುದು.ಈ ಸಂಪರ್ಕ ಸೇತುವೆಯಿಂದ ಎರಡು ತಾಲ್ಲೂಕಿನ ರೈತರ ಕೃಷಿ ಉತ್ಪನ್ನಗಳು ಸರಕು ಸಾಗಣೆ ಚಟುವಟಿಕೆ ಕೈಗೊಳ್ಳಲು ಅನುಕೂಲ ವಾಗಲಿದೆ. ಅಲ್ಲದೆ ಇದೇ ಬಾಂದಾರ ಯೋಜನೆಯಿಂದ ಜೇವರ್ಗಿ ತಾಲ್ಲೂಕಿನ 20



ಕೆರಗಳಿಗೆ ನೀರು ತುಂಬಿಸುವ ಯೋಜನೆಯುನ್ನು ಹಾಕಿಕೊಳ್ಳಲಾಗಿದೆ.

ಜೇವರ್ಗಿ ತಾಲ್ಲೂಕಿನ ಹರವಾಳ, ಕೋಟನೂರ, ನೆಲೋಗಿ, ರಾಸಣಗಿ, ಹಂದನೂರ, ಕೋಬಾಳ, ಬಣಮಿಗಿ, ಕಲ್ಲಹಂಗರಗಾ, ಇಂದಿರಾನಗರ ತಾಂಡಾ ಹರವಾಳ ಹಾಗೂ ಅಫಜಲಪುರ ಮತಕ್ಷೇತ್ರದ ಹೇರೂರ (ಬಿ), ಮೈನಾಳ, ಬೆಳಗುಂಪಾ, ಚಿನಮಳ್ಳಿ ಗ್ರಾಮಗಳಿಗೆ ಶಾಶ್ವತ ಕುಡಿಯುವ ನೀರು ಮತ್ತು ನೀರಾವರಿ ಸೌಲಭ್ಯ ಒದಗಿಸಿದಂತಾಗು. ತ್ತದೆ.ಕಳೆದ 15 ದಿನಗಳ ಹಿಂದೆ ಕಾಮಗಾರಿಗೆ ಚಾಲನೆ ನೀಡಲಾಗಿದ್ದು, ಎರಡು ವರ್ಷದೊಳಗೆ ಕಾಮಗಾರಿ ಪೂರ್ಣಗೊಳ್ಳಲಿದೆ

# ಉಚಿತ ಯೋಜನೆ, ಸುಪ್ರೀಂ ಗರಂ

**ನವದೆಹಲಿ.ಫೆ19–**ಚುನಾವಣೆ ಸಮೀಪಿಸಿದಾಗ ರಾಜ್ಯ ಸರ್ಕಾರಗಳು ಘೋಷಿಸುವ 'ಉಚಿತ ಯೋಜನೆಗಳು' ಹಾಗೂ ಉಚಿತ ನೇರ ಹಣ ವರ್ಗಾವಣೆ (ಡೈರೆಕ್ಟ್ ಕ್ಯಾಶ್ ಟ್ರಾನ್ಸ್‌ಫರ್) ಕುರಿತು , ಸುಪ್ರೀಂಕೋ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ.

ಇಂತಹ 'ಫ್ರೀಬೀಸ್' ಸಂಸ್ಕೃತಿ ದೇಶದ ದೀರ್ಘಕಾಲಿಕ ಅಭಿವೃದ್ಧಿಗೆ ಅಡ್ಡಿಯಾಗಬಹುದು ಎಂದು ನ್ಯಾಯಾಲಯ ಗಂಭೀರ ಎಚ್ಚರಿಕೆ ನೀಡಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರ ನೇತೃತ್ವದ ಪೀಠದ ನ್ಯಾಯಮೂರ್ತಿಗಳಾದ ಜೋಮಾಲ್ಯಾ ಭಗೀಚ ಹಾಗೂ ವಿಫುಲ್ ಪಾಂಚೋಗಿ ಅವರು ತಮಿಳುನಾಡು ವಿದ್ಯುತ್ ವಿತರಣೆ ಕಂಪನಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸುವ ಸಂದರ್ಭದಲ್ಲಿ ಈ ಮೌಖಿಕ ಅಭಿಪ್ರಾಯಗಳನ್ನು ವ್ಯಕ್ತಪಡಿಸಿತು.ರಾಜ್ಯ ಸರ್ಕಾರಗಳು ಚುನಾವಣೆಗೆ ಮುನ್ನ ಅತಿಯಾಗಿ ಉಚಿತ ಸೌಲಭ್ಯಗಳನ್ನು ಘೋಷಿಸುತ್ತಿರುವ ಪ್ರವೃತ್ತಿ ಕುರಿತು ಪೀಠ ಪ್ರಶ್ನೆ ಎತ್ತಿತು. "ರಾಜ್ಯ ಲಾಭಾಂಶದಲ್ಲಿದ್ದರೂ ಸಹ ಆ ಹಣವನ್ನು ರಸ್ತೆ, ಆಸ್ಪತ್ರೆ, ಶಾಲೆಗಳಂತಹ ಮೂಲಸೌಕರ್ಯ ಅಭಿವೃದ್ಧಿಗೆ ಬಳಸುವುದು ಅವರ ಕರ್ತವ್ಯವಲ್ಲವೇ ಅದರ ಬದಲು ಆಹಾರ, ಬಟ್ಟೆ, ವಿದ್ಯುತ್, ನೇರ ಹಣ ವರ್ಗಾವಣೆ ಹೀಗೆ ನಿರಂತರವಾಗಿ ವಿತರಣೆ ಮಾಡಿದರೆ ದೇಶದ ಅಭಿವೃದ್ಧಿಗೆ ಧಕ್ಕೆಯಾಗುವುದಿಲ್ಲವೇ ಎಂದು ಮುಖ್ಯ ನ್ಯಾಯಮೂರ್ತಿ ಪ್ರಶ್ನಿಸಿದರು.ಸಾಮಾಜಿಕ ನ್ಯಾಯದ ಅಂಗವಾಗಿ ಬಡವರು, ಹಿಂದುಳಿದವರಿಗೆ ನೆರವು ನೀಡುವುದು ರಾಜ್ಯದ ಕರ್ತವ್ಯ ಎಂಬುದನ್ನು ನ್ಯಾಯಾಲಯ ಒಪ್ಪಿಕೊಂಡಿತು. ಆದರೆ "ಪಾವತಿಸಲು ಸಾಮರ್ಥ್ಯ ವಿರುವವರಿಗೂ ಮತ್ತು ಸಾಧ್ಯವಿಲ್ಲದವರಿಗೂ ವ್ಯತ್ಯಾಸ ಮಾಡದೆ ಉಚಿತ ಸೌಲಭ್ಯ ನೀಡುವುದು 'ಅನುಗ್ರಹ ನೀತಿ'ಯಾಗುತ್ತದೆ. ಇದು ಆರ್ಥಿಕ ಬೆಳವಣಿಗೆಗೆ ಅನುಕೂಲಕರವಲ್ಲ" ಎಂದು ಅಭಿಪ್ರಾಯಪಟ್ಟಿತು."ರಾಜ್ಯಗಳು ಕೊರತೆಯಲ್ಲಿದ್ದರೂ ಸಹ ಹಣ ಹಂಚಿಕೆಯನ್ನು ಮುಂದುವರಿಸುತ್ತಿವೆ. ಆ ಹಣ ಎಲ್ಲಿಂದ ಬರುತ್ತದೆ? ಅದನ್ನು ದೀರ್ಘಕಾಲಿಕ ಅಭಿವೃದ್ಧಿ ಯೋಜನೆಗಳಿಗೆ ಮೀಸಲಿಡಬಾರದೇ ಎಂದು ಪೀಠ ಪ್ರಶ್ನಿಸಿತು.ನೇರ ಹಣ ವರ್ಗಾವಣೆ ಯೋಜನೆಗಳ ಕುರಿತು ಕೂಡ ಪೀಠ ಕಳವಳ ವ್ಯಕ್ತಪಡಿಸಿತು. "ಜನರಿಗೆ ಉದ್ಯೋಗಾವಕಾಶ ಸೃಷ್ಟಿಸಿ, ಅವರಲ್ಲಿ ಸ್ವಾಭಿಮಾನ ಹಾಗೂ ಸ್ವಾವಲಂಬನೆ ಬೆಳೆಸುವುದು ಮುಖ್ಯ. ಎಲ್ಲವನ್ನೂ ಉಚಿತವಾಗಿ ನೀಡಿದರೆ ಜನರು ಕೆಲಸ ಮಾಡಲು ಪ್ರೇರಿತರಾಗುವುದೇ? ಎಂದು ಪ್ರಶ್ನಿಸಿತು.ಚುನಾವಣೆಗಳಿಗೆ ಮುನ್ನ ಏಕಾಏಕಿ ಹೊಸ ಯೋಜನೆಗಳನ್ನು ಘೋಷಿಸುವ ಬಗ್ಗೆ ಉಲ್ಲೇಖಿಸಿದ ಮುಖ್ಯ ನ್ಯಾಯಮೂರ್ತಿ, "ಇದು ರಾಷ್ಟ್ರ ನಿರ್ಮಾಣದ ಮಾರ್ಗವೇ ರಾಜಕೀಯ ನಾಯಕರು, ಪಕ್ಷಗಳು ಹಾಗೂ ನೀತಿನಿರ್ಮಾತರು ಈ ನೀತಿಗಳನ್ನು ಪುನರ್ವಿಮರ್ಶೆ ಮಾಡಬೇಕಾದ ಸಮಯ ಬಂದಿದೆ" ಎಂದು ಹೇಳಿದರು. ಈ ವಿಚಾರಣೆ ವೇಳೆ ನ್ಯಾಯಾಲಯದ ಕಠಿಣ ಟೀಕೆಗಳು 'ಫ್ರೀಬೀಸ್ ಸಂಸ್ಕೃತಿ' ಕುರಿತು ರಾಷ್ಟ್ರವ್ಯಾಪಿ ಚರ್ಚೆಗೆ ಕಾರಣ ವಾಗುವ ಸಾಧ್ಯತೆ ಇದೆ.

# ಸಿಯುಕೆಯಲ್ಲಿ ಅಂತಃಪ್ರಜ್ಞೆಯಿಂದ ಜ್ಞಾನ ಧ್ಯಾನ ವಿಜ್ಞಾನ ಕಾರ್ಯಾಗಾರ



**ಕಲಬುರಗಿ,ಫೆ 19:** ಮಾಹಿತಿಯು ಜ್ಞಾನಕ್ಕೆ ಕಾರಣವಾಗುತ್ತದೆ, ಜ್ಞಾನವು ಅಂತಃಪ್ರಜ್ಞೆಗೆ ಕಾರಣವಾಗುತ್ತದೆ, ಅಂತಃಪ್ರಜ್ಞೆಯು ಬುದ್ಧಿವಂತಿಕೆಗೆ ಕಾರಣವಾಗುತ್ತದೆ ಎಂದು ಬೆಂಗಳೂರಿನ ಪಿರಮಿಡ್ ವ್ಯಾಲಿ ಇಂಟರ್‌ನ್ಯಾಷನಲ್‌ನ ಟ್ರಸ್ಟಿ ಮತ್ತು ಮಂಡಳಿಯ ಸದಸ್ಯ ಡಾ. ಬಿ. ಶಿವರಾಮಪ್ಪ ಹೇಳಿದರು.

ಅವರು ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಶಿಕ್ಷಣ ಮತ್ತು ತರಬೇತಿ ವಿಭಾಗವು ಆಯೋಜಿಸಿದ್ದ ಅಂತಃಪ್ರಜ್ಞೆಯಿಂದ ಜ್ಞಾನ ಧ್ಯಾನ ವಿಜ್ಞಾನ ಕಾರ್ಯಾಗಾರದಲ್ಲಿ ಮಾತನಾಡುತ್ತಿದ್ದರು. ಅವರು ಮುಂದುವರೆದು ಮಾತನಾಡಿ ಅಂತಃಪ್ರಜ್ಞೆ ಮತ್ತು ಬುದ್ಧಿವಂತಿಕೆಯನ್ನು ಪಡೆಯಲು ಸ್ವಯಂ ಮತ್ತು ಪರಿಸರದ ಬಗ್ಗೆ ಮಾಹಿತಿ ಮತ್ತು ಜ್ಞಾನ ಅತ್ಯಗತ್ಯ. ಜಗತ್ತನ್ನು ಹೆಚ್ಚು ಶಾಂತಿಯುತ ಮತ್ತು ಉತ್ಪಾದಕವಾಗಿಸಲು ನಾವು ಬುದ್ಧಿವಂತಿಕೆಯ ಮಟ್ಟವನ್ನು ತಲುಪಬೇಕು. ಸಂತೋಷದ ಜೀವನವನ್ನು ನಡೆಸಲು ಜ್ಞಾನ ಮಾತ್ರ ಸಾಕಾಗುವುದಿಲ್ಲ. ಧ್ಯಾನವು ಅಂತಃಪ್ರಜ್ಞೆ ಮತ್ತು ಬುದ್ಧಿವಂತಿಕೆಯನ್ನು ಅಭಿವೃದ್ಧಿಪಡಿಸಲು ಸಹಾಯ ಮಾಡುತ್ತದೆ. ಆದ್ದರಿಂದ ನಾವು ಧ್ಯಾನವನ್ನು ಅಭ್ಯಾಸ ಮಾಡಬೇಕು ಮತ್ತು ಅಂತರಮುಖವಾಗಿ ನೋಡಬೇಕು. ಅಂತಃಪ್ರಜ್ಞೆಯು ಆಧ್ಯಾತ್ಮಿಕ ಮತ್ತು ವೈಜ್ಞಾನಿಕ ದೃಷ್ಟಿಕೋನಗಳನ್ನು ಹೊಂದಿದೆ. ಪರಿಣಾಮಕಾರಿ ಧ್ಯಾನಕ್ಕಾಗಿ ಉಸಿರಾಟದ ಅರಿವು, ಮೌನ ಅಭ್ಯಾಸ ಮತ್ತು ಆಂತರಿಕ ವೀಕ್ಷಣೆ ಬಹಳ ಮುಖ್ಯ. ವಿದ್ಯಾರ್ಥಿಗಳು ಅದನ್ನು ಪ್ರತಿದಿನ ಅಭ್ಯಾಸ ಮಾಡುವ ಮೂಲಕ ಅಂತಃಪ್ರಜ್ಞೆಯನ್ನು ಬೆಳೆಸಿಕೊಳ್ಳಬಹುದು ಎಂದು ಹೇಳಿದರು.

ಶಿಕ್ಷಣ ಮತ್ತು ತರಬೇತಿ ನಿಕಾಯದ ಡೀನ್ ಪ್ರೊ. ಜಿ. ಆರ್. ಅಂಗಡಿ ಉದ್ಘಾಟನಾ ಭಾಷಣ ಮಾಡಿ, ಸಮತೋಲಿತ ಮತ್ತು ಸ್ವಯಂ–ಅರಿವಿನ ಕಲಿಕೆಯನ್ನು ಬೆಳೆಸಲು ಆಧುನಿಕ ಶಿಕ್ಷಣದಲ್ಲಿ ಆಂತರಿಕ ಪ್ರಜ್ಞೆ ಮತ್ತು ಸಾವಧಾನತೆಯ ಅಭ್ಯಾಸಗಳನ್ನು ಸಂಯೋಜಿಸುವುದು ಬಹಳ ಮುಖ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾರ್ಗದರ್ಶಿ ಧ್ಯಾನ ಅಧಿವೇಶನವನ್ನು ನಡೆಸಲಾಯಿತು.ಕಾರ್ಯಕ್ರಮ ಸಂಯೋಜಕಿ ಜ್ಯೋಸ್ತನ ಅಂಬೇವಾಡ್ಕರ್ ಸ್ವಾಗತಿಸಿ ಕಾರ್ಯಕ್ರಮವನ್ನು ನಿರೂಪಿಸಿದರು. ಸಂತೋಷ್ ಬಶೆಟ್ಟಿ ವಂದಿಸಿದರು. ಶಿಕ್ಷಣ ವಿಭಾಗದ ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H